ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SP NEWS ಡಿಜಿಟಲ್ ನ್ಯೂಸ್ ಚಾನಲ್

SURYA PRAGATHI Kannada daily

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue:114 ಸಂಚಿಕೆ: 114 | Date:20-05-2026 Wednesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

# ಬಡವರ ಹಿತ ಕಾಯುವಲ್ಲಿ ಮತ್ತು ನುಡಿದಂತೆ ನಡೆಯಲು ಸದಾ ಬದ್ಧ; ಮುಖ್ಯಮಂತ್ರಿ ಸಿದ್ದರಾಮಯ್ಯ

## ಐತಿಹಾಸಿಕ ಸಮಾವೇಶಕ್ಕೆ ಸಾಕ್ಷಿಯಾದ ಕಲ್ಪತರು ನಗರಿ ; 682 ಕೋಟಿ ಮೊತ್ತದ ಬೃಹತ್ ಅಭಿವೃದ್ಧಿ ಕಾರ್ಯ ಉದ್ಘಾಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ನಮ್ಮ ಸರ್ಕಾರ ಯಾವಾಗಲೂ ನುಡಿದಂತೆ ನಡೆಯುವ ಸರ್ಕಾರ. ಕೊಟ್ಟ ಮಾತನ್ನು ಉಳಿಸಿಕೊಳ್ಳುವ ಪ್ರಾಮಾಣಿಕ ಪ್ರಯತ್ನವನ್ನು ನಾವು ಸದಾ ಮಾಡಿಕೊಂಡು ಬಂದಿದ್ದೇವೆ. ನಮ್ಮ ಸರ್ಕಾರ ರಾಜ್ಯದ ಬಡವರ ಹಿತ ಕಾಯುವಲ್ಲಿ ಸದಾ ಬದ್ಧವಾಗಿದೆ, ಕೇವಲ ಒಂದು ವರ್ಷದಲ್ಲಿ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಯಶಸ್ವಿಯಾಗಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ತಿಳಿಸಿದರು.



ರಾಜ್ಯ ಸರ್ಕಾರಕ್ಕೆ ಮೂರು ವರ್ಷಗಳು ಪೂರೈಸಿರುವ ಸಂದರ್ಭದಲ್ಲಿ ತುಮಕೂರು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಮಂಗಳವಾರ ನಗರದ ಜ್ಯೂನಿಯರ್ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ, "ಮೂರು ವರ್ಷಗಳ ಸಾಧನಾ ಸಮರ್ಪಣಾ" ಸಮಾವೇಶ, ಮಾದರಿಯ ವಸ್ತು ಪ್ರದರ್ಶನ ಮತ್ತು ತುಮಕೂರು ಜಿಲ್ಲೆಯಲ್ಲಿ ನಡೆದಿರುವ 682 ಕೋಟಿ ಮೊತ್ತದ ಬೃಹತ್ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆಯನ್ನು ನೆರವೇರಿಸಿ ಅವರು ಮಾತನಾಡಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ರಚನಾ ಸಭೆಯಲ್ಲಿ ಹೇಳಿದಂತೆ, ರಾಜಕೀಯ ಸ್ವಾತಂತ್ರ್ಯ ಯಶಸ್ವಿಯಾಗಬೇಕಾದರೆ ಪ್ರತಿಯೊಬ್ಬರಿಗೂ ಸಾಮಾಜಿಕ ಮತ್ತು ಆರ್ಥಿಕ ಶಕ್ತಿ ಸಿಗಬೇಕು. ನಮ್ಮ ಸರ್ಕಾರ ಯಾವುದೇ ಜಾತಿ, ಧರ್ಮ ಅಥವಾ ಬೇಧ-ಭಾವವಿಲ್ಲದೆ, ಎಲ್ಲಾ ಸಮುದಾಯಗಳ ಬಡ ಜನರಿಗೆ ಆರ್ಥಿಕ ಮತ್ತು ಸಾಮಾಜಿಕ ಭದ್ರತೆಯನ್ನು ಒದಗಿಸುವ ಕೆಲಸ ಮಾಡಿದೆ ಎಂದು ತಿಳಿಸಿದರು.

ಕಳೆದ ಚುನಾವಣೆ ಸಂದರ್ಭದಲ್ಲಿ ಡಾ. ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ಸಿದ್ಧಗೊಂಡಿದ್ದ ಪ್ರಣಾಳಿಕೆಯಲ್ಲಿ ಒಟ್ಟು 592 ಭರವಸೆಗಳನ್ನು ಜನರಿಗೆ ನೀಡಲಾಗಿತ್ತು. ಆ ಪೈಕಿ ಈಗಾಗಲೇ 250ಕ್ಕೂ ಹೆಚ್ಚು ಭರವಸೆಗಳನ್ನು ಸರ್ಕಾರ ಯಶಸ್ವಿಯಾಗಿ ಈಡೇರಿಸಿದ್ದು, ಉಳಿದ ಭರವಸೆಗಳನ್ನೂ ಸಹ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದರು.

ನಾವು ನುಡಿದಂತೆ ನಡೆದಿದ್ದೇವೆ. ತಲಾದಾಯದಲ್ಲಿ ಕನ್ನಡಿಗರು ಇಡೀ ದೇಶದಲ್ಲೇ ಮೊದಲ ಸ್ಥಾನದಲ್ಲಿ ಇದ್ದಾರೆ. ಇಡೀ ದೇಶದ ಜಿಎಸ್‌ಟಿಗೆ ನಮ್ಮ ಕೊಡುಗೆಯೇ ಅಪಾರವಾಗಿದೆ. ದೇಶದ ತಲಾದಾಯಕ್ಕಿಂತ ರಾಜ್ಯದ ತಲಾದಾಯ ಹೆಚ್ಚಾಗಿರುವ ರೀತಿಯಲ್ಲಿ ನಾವು ಪ್ರಗತಿ ಸಾಧಿಸಿದ್ದೇವೆ ಎಂದು ತಿಳಿಸಿದರು.

2013ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ ನೀಡಿದ್ದ 165 ಭರವಸೆಗಳಲ್ಲಿ 158 ಭರವಸೆಗಳನ್ನೂ ಈಡೇರಿಸಲಾಗಿತ್ತು. ಅಷ್ಟೇ ಅಲ್ಲದೆ, ಪ್ರಣಾಳಿಕೆಯಲ್ಲಿ ಘೋಷಿಸದಿದ್ದರೂ ಸಾರ್ವಜನಿಕರ ಹಿತದೃಷ್ಟಿಯಿಂದ ಸುಮಾರು 30ಕ್ಕೂ ಹೆಚ್ಚು ಆದ್ಯತಾ ಕಾರ್ಯಕ್ರಮಗಳನ್ನು ಜಾರಿಗೆ ತಂದ ಇತಿಹಾಸ ನಮ್ಮ ಸರ್ಕಾರದ್ದಾಗಿದೆ ಎಂದು ಅವರು ಸ್ಮರಿಸಿಕೊಂಡರು.

ನಮ್ಮ ಪಂಚ ಗ್ಯಾರಂಟಿ ಯೋಜನೆಗಳನ್ನು ವಿರೋಧ ಪಕ್ಷದವರು ಹಾಗೂ ಸ್ವತಃ ದೇಶದ ಪ್ರಧಾನಮಂತ್ರಿಯವರೂ ಸೇರಿದಂತೆ ಹಲವರು ಈ ಯೋಜನೆಗಳನ್ನು ಜಾರಿಗೊಳಿಸಲು ಸಾಧ್ಯವೇ ಇಲ್ಲ, ಒಂದು ವೇಳೆ ಜಾರಿ ಮಾಡಿದರೆ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಮತ್ತು ಅಭಿವೃದ್ಧಿ ಕೆಲಸಗಳಿಗೆ ಹಣವಿರುವುದಿಲ್ಲ ಎಂದು ಟೀಕಿಸಿದ್ದರು. ಆದರೆ, ನಾವು ಅಧಿಕಾರಕ್ಕೆ ಬಂದ ಒಂದೇ ವರ್ಷದಲ್ಲಿ ಈ ಎಲ್ಲಾ ಗ್ಯಾರಂಟಿಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದೇವೆ. ಇದಕ್ಕಾಗಿ ರಾಜ್ಯ ಸರ್ಕಾರ ಈವರೆಗೆ 1.40ಲಕ್ಷ ಕೋಟಿ ರೂ.ಗಳನ್ನು ವೆಚ್ಚ ಮಾಡಿದೆ. ಅಲ್ಲದೆ, ರಾಜ್ಯವನ್ನು ಸರ್ವಾಂಗೀಣ ಅಭಿವೃದ್ಧಿ ಪಥದತ್ತ ಕೊಂಡೊಯ್ದಿದ್ದೇವೆ ಎಂದು ತಿಳಿಸಿದರು.



ತುಮಕೂರು ನಗರವನ್ನು 'ಎರಡನೇ ಬೆಂಗಳೂರು' ಆಗಿ ಪರಿವರ್ತಿಸಬೇಕೆಂಬುದು ಡಾ. ಜಿ. ಪರಮೇಶ್ವರ ಅವರ ದೊಡ್ಡ ಸಂಕಲ್ಪ ಸಿಎಂ ಡಿ.ಕೆ.ಶಿವಕುಮಾರ್

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಬಡವರ ಮತ್ತು ಶೋಷಿತರ ಬದುಕಿನಲ್ಲಿ ಸಾಮಾಜಿಕ ಬದಲಾವಣೆ ತಂದಿರುವ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಇಂದು ಇಡೀ ವಿಶ್ವಕ್ಕೇ ಮಾದರಿಯಾಗಿವೆ ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಐದು ಗ್ಯಾರಂಟಿ ಯೋಜನೆಗಳು ಕೇವಲ ರಾಜ್ಯಕ್ಕೆ ಸೀಮಿತವಾಗಿಲ್ಲ. "ಇಡೀ ವಿಶ್ವದಲ್ಲೇ ಬಡವರ ಬದುಕಿನಲ್ಲಿ ಸಾಮಾಜಿಕ ಬದಲಾವಣೆ ತಂದ ಈ ಐದು ಗ್ಯಾರಂಟಿಗಳು ಜಗತ್ತಿಗೆ ಮಾದರಿ ಎಂದು ಆಕ್ಸ್‌ಫರ್ಡ್ ಯುನಿವರ್ಸಿಟಿಯಲ್ಲಿ ಉಲ್ಲೇಖಿಸಲಾಗಿದೆ" ಇದು ನಮ್ಮ ಸರ್ಕಾರಕ್ಕೆ ಹೆಮ್ಮೆ ಎಂದು ತಿಳಿಸಿದರು.

ಬೆಂಗಳೂರಿನ ಜನಸಂಖ್ಯೆ ಮತ್ತು ಒತ್ತಡವನ್ನು ನಿಯಂತ್ರಿಸಲು ಬೆಂಗಳೂರಿನ ಉತ್ತರ ಭಾಗದಲ್ಲಿರುವ ತುಮಕೂರು ನಗರವನ್ನು 'ಎರಡನೇ ಬೆಂಗಳೂರು' ಆಗಿ ಪರಿವರ್ತಿಸಬೇಕು ಎಂಬುದು ಸಚಿವ ಡಾ. ಜಿ. ಪರಮೇಶ್ವರ ಅವರ ದೊಡ್ಡ ಸಂಕಲ್ಪವಾಗಿದೆ. ಈ ಐತಿಹಾಸಿಕ ಕಲ್ಪತರು ನಾಡನ್ನು ಮುಂದಿನ ದಿನಗಳಲ್ಲಿ ಮತ್ತಷ್ಟು ಅಭಿವೃದ್ಧಿಪಡಿಸಲು ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಭರವಸೆ ನೀಡಿದರು.

ಗೃಹ ಸಚಿವ ಜಿ.ಪರಮೇಶ್ವರ್ ಮಾತನಾಡಿ, ರಾಜ್ಯದ ಜನತೆಗೆ ನೀಡಿದ ಭರವಸೆಗಳನ್ನು ಈಡೇರಿಸಲು ನಮ್ಮ ಸರ್ಕಾರ ಕಟಿಬದ್ಧವಾಗಿದೆ ಎಂದು ತಿಳಿಸಿದರು.

ಬಡವರು, ರೈತರು, ಕಾರ್ಮಿಕರು ಮತ್ತು ಶೋಷಿತರ ಸ್ವಾಭಿಮಾನದ ಬದುಕಿಗಾಗಿ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದು, ಇದಕ್ಕಾಗಿ ಈ ನಾಲ್ಕು ವರ್ಷಗಳಲ್ಲಿ ಬರೋಬ್ಬರಿ 2 ಲಕ್ಷ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲಾಗುತ್ತಿದೆ ಎಂದರು.

ಹಲವು ದಶಕಗಳಿಂದ ರಾಜ್ಯದ ಹಟ್ಟಿ, ತಾಂಡ, ಮಜರೆ ಗ್ರಾಮಗಳು ಕಂದಾಯ ಗ್ರಾಮಗಳಾಗದೆ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದರು. ಇದನ್ನು ರಾಜ್ಯ ಕಂದಾಯ ಇಲಾಖೆ ಆದ್ಯತೆ ಕಾರ್ಯಕ್ರಮವಾಗಿ ತೆಗೆದುಕೊಂಡು 14ಲಕ್ಷಕ್ಕೂ ಹೆಚ್ಚು ಹಕ್ಕು ಪತ್ರಗಳನ್ನು ರಾಜ್ಯದಲ್ಲಿ ವಿತರಿಸಿದೆ. ತುಮಕೂರು ಜಿಲ್ಲೆಯೊಂದರಲ್ಲೇ 22ಸಾವಿರ ಕಂದಾಯ ಗ್ರಾಮಗಳ ಹಕ್ಕು ಪತ್ರಗಳನ್ನು ನೀಡುವ ಮೂಲಕ ಇಂದು ಗಿನ್ನಿಸ್ ದಾಖಲೆ ಸೃಷ್ಟಿಸಲಾಗಿದೆ ಎಂದು ಅವರು ತಿಳಿಸಿದರು. ಅಲ್ಲದೆ, ತುಮಕೂರು ಜಿಲ್ಲೆಯಲ್ಲಿ ರಾಜ್ಯದಲ್ಲಿಯೇ ಎರಡನೇ ನೇ 2ನೇ ಪುಟಕ್ಕೆ

# ಕರ್ನಾಟಕ ಮಾದರಿ ಅಭಿವೃದ್ಧಿ ಮುಂದೆ ಗುಜರಾತ್ ಮಾದರಿ ಟೊಳ್ಳು ಸಿಎಂ ಗುಡುಗು

ಸೂರ್ಯಪ್ರಗತಿನ್ಯೂಸ್.ಕಾಂ

ನಾವು ಅಧಿಕಾರಕ್ಕೆ ಬಂದ ಬಳಿಕ ಸರ್ವ ಜಾತಿ, ಸರ್ವ ಧರ್ಮದ ಸಕಲ ಜನತೆಯ ಅಭಿವೃದ್ಧಿಗೆ ಕೆಲಸ ಮಾಡಿದ್ದೇವೆ. ಎಲ್ಲಾ ಜಾತಿ, ಎಲ್ಲಾ ಧರ್ಮದ ಬಡವರಿಗೆ ಶಕ್ತಿ ತುಂಬುವ ಕೆಲಸ ಮಾಡಿದ್ದೇವೆ.ಬಿಜೆಪಿಯವರ ರೀತಿ ಜಾತಿ ಧರ್ಮದದ ಹೆಸರಲ್ಲಿ ಮನುಷ್ಯರನ್ನು ವಿಭಜಿಸುವ ಕೆಟ್ಟ ರಾಜಕಾರಣ ನಾವು ಮಾಡಲಿಲ್ಲ. ಬಿಜೆಪಿಯವರ ಎಲ್ಲಾ ಅಪಪ್ರಚಾರಗಳನ್ನು ಸುಳ್ಳಾಗಿಸಿ ನಾವು ಅಭಿವೃದ್ಧಿ ಮಾಡಿ ತೋರಿಸಿದ್ದೇವೆ.



### ಕರ್ನಾಟಕ ಮಾದರಿ ಅಭಿವೃದ್ಧಿ ಮುಂದೆ ಗುಜರಾತ್ ಮಾದರಿ ಟೊಳ್ಳು

35 ವರ್ಷಗಳಿಂದ ಗುಜರಾತ್ ನಲ್ಲಿ ಬಿಜೆಪಿ ಅಧಿಕಾರದಲ್ಲಿದೆ. ಇಲ್ಲಿ ಅಭಿವೃದ್ಧಿಯೇ ಆಗಿಲ್ಲ. ಮೊನ್ನೆಯಷ್ಟೆ ಕೇವಲ 2500 ರೂ ಮನೆ ಬಾಡಿಗೆ ಕಟ್ಟಲಾಗದ ಕಾರಣಕ್ಕೆ ಬಾಡಿಗೆಗಿದ್ದ ಬಡ ಕುಟುಂಬದ 13 ವರ್ಷದ ಮಗಳ ಮೇಲೆ ಮನೆ ಮಾಲೀಕ ಅತ್ಯಾಚಾರ ಎಸಗಿರುವ ಘಟನೆ ಗುಜರಾತ್ ನಲ್ಲಿ ನಡೆದಿದೆ. ಇದು ನಿಜವಾದ ಗುಜರಾತ್ ಮಾದರಿ. ಕರ್ನಾಟಕ ಮಾದರಿ ಅಭಿವೃದ್ಧಿ ಮುಂದೆ ಗುಜರಾತ್ ಮಾದರಿ ಟೊಳ್ಳು ಎನ್ನುವುದನ್ನು ಉದಾಹರಣೆ ಸಮೇತ ವಿವರಿಸಿದರು.

ಮೋದಿಯವರು ಪ್ರಧಾನಿ ಆಗುವ ಮೊದಲು ದೇಶದಲ್ಲಿ ಡೀಸೆಲ್, ಪೆಟ್ರೋಲ್, ಚಿನ್ನದ ಬೆಲೆ ಎಷ್ಟಿತ್ತು. ಈಗ ಅದು ಆಕಾಶಕ್ಕೆ ಏರಿದೆ. ಟ್ರಂಪ್ ಬಾಲ ಹಿಡಿದು ಸುತ್ತುತ್ತಿದ್ದ ಮೋದಿಯವರೇ ಈ ಬೆಲೆ ಏರಿಕೆಗೆ ಕಾರಣ. ಮೋದಿ ದರ್ಬಾರಿನಲ್ಲಿ ಅಂಬಾನಿ ಮತ್ತು ಅದಾನಿ ಮಾತ್ರ ಲಾಭ ಮಾಡಿಕೊಂಡು ಈಗ ಇವರ ಆಸ್ತಿ 8 ಲಕ್ಷ ಕೋಟಿಗೆ ಏರಿಕೆಯಾಗಿದೆ. ಬಡವರು ಮತ್ತು ಮಧ್ಯಮ ವರ್ಗದವರ ಆದಾಯ ಮತ್ತು ಬದುಕು ನೆಲಕಚ್ಚಿದ್ದನ್ನು ವಿವರಿಸಿದರು. ಮೋದಿ ಮೋದಿ ಎಂದು ಕುಣಿಯುತ್ತಿದ್ದ ಭಾರತದ ಬಡ ಜನರು ಮತ್ತು ಮಧ್ಯಮ ವರ್ಗದವರಿಗೆ ಭ್ರಮನಿರಸನವಾಗಿದೆ ಎಂದರು.

ನಾವು ನುಡಿದಂತೆ ನಡೆದಿದ್ದೇವೆ. ತಲಾ ಆದಾಯದಲ್ಲಿ ಕನ್ನಡಿಗರು ಇಡೀ ದೇಶದಲ್ಲೇ ನಂಬರ್ ಒನ್ ಇದ್ದಾರೆ. ಇಡೀ ದೇಶದ ಉಖಖಿ ಗೆ ನಮ್ಮ ಕೊಡುಗೆ ಅಪಾರ ಇದೆ. ದೇಶದ ತಲಾ ಆದಾಯಕ್ಕಿಂತ ರಾಜ್ಯದ ಆದಾಯ ಹೆಚ್ಚಾಗಿರುವ ರೀತಿಯಲ್ಲಿ ನಾವು ಪ್ರಗತಿ ಸಾಧಿಸಿದ್ದೇವೆ. ನಾವು ನುಡಿದಂತೆ ನಡೆದು ಸಾಬೀತುಪಡಿಸಿರುವುದರಿಂದ ಮತ್ತೆ 2028ರ ವಿಧಾನಸಭಾ ಚುನಾವಣೆಯಲ್ಲೂ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವುದು ಶತಸಿದ್ಧ. ಕುವೆಂಪು ಅವರ "ಸರ್ವ ಜನಾಂಗದ ಶಾಂತಿಯ ತೋಟ" ಎನ್ನುವ ಆಶಯದ ನಾಡನ್ನು ಇನ್ನಷ್ಟು ಗಟ್ಟಿಯಾಗಿ ರೂಪಿಸುತ್ತೇವೆ. ಸಂವಿಧಾನಬದ್ದ ಅಭಿವೃದ್ಧಿ ಮಾರ್ಗದಲ್ಲಿ ನಾಡನ್ನು ಮುನ್ನಡೆಸುತ್ತೇವೆ ಎಂದು ಭರವಸೆ ನೀಡಿದರು.

### "ನೀಟ್ ಪರೀಕ್ಷೆ ರದ್ದಿಗೆ ಮೋದಿ ಸರ್ಕಾರ ಕಾರಣ*

ನೀಟ್ ಪರೀಕ್ಷೆ ರದ್ದಾಗಿ 22 ಲಕ್ಷ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟ ಆಡಿ, ಹಲವು ವಿದ್ಯಾರ್ಥಿಗಳ ಆತ್ಮಹತ್ಯೆಗೆ ಮೋದಿ ಸರ್ಕಾರ ಕಾರಣ. ರಾಜ್ಯದ ಅಇಖ ಮಾದರಿಯಲ್ಲಿ ಪರೀಕ್ಷೆ ನಡೆಸಿ ಎನ್ನುವ ನಮ್ಮ ಸಲಹೆಯನ್ನು ತಿರಸ್ಕರಿಸಿ ನೀಟ್ ನಲ್ಲಿ ಅದ್ವಾನ ಮಾಡಿದ್ದಾರೆ. ವರ್ಷಕ್ಕೆ 2 ಕೋಟಿ ಉದ್ಯೋಗದ ಭರವಸೆ ನೀಡಿದ್ದ ಮೋದಿಯ ಅಚ್ಚೇ ದಿನ ಬರಲಿಲ್ಲ. ನೀಟ್ ಪರೀಕ್ಷೆ ಬರೆದ ವಿದ್ಯಾರ್ಥಿಗಳ ಆತ್ಮಹತ್ಯೆ ತಡೆಯದ ಮೋದಿ ಸರ್ಕಾರ, ರೈತರ ಆದಾಯವನ್ನೂ ದುಪ್ಪಟ್ಟು ಮಾಡಲಿಲ್ಲ. ಕಪ್ಪು ಹಣ ತರಲಿಲ್ಲ. ಹೀಗಾಗಿ ಬಿಜೆಪಿ-ಆರ್ ಎಸ್ ಎಸ್ ಸರ್ಕಾರ ಸಂಪೂರ್ಣ ವಿಫಲವಾಗಿ ದೇಶದ ಸಾಲವನ್ನು 220 ಲಕ್ಷ ಕೋಟಿಗೆ ಹೆಚ್ಚಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾವು ನೆಮ್ಮದಿನ ನಾಡು ಕಟ್ಟುವ ಸರ್ಕಾರ ಕೊಟ್ಟಿದ್ದೇವೆ. ಮೋದಿ ದೇಶದ ನೆಮ್ಮದಿ ಕಸಿಯುವ ಸರ್ಕಾರ ಕೊಟ್ಟಿದ್ದಾರೆ ಎಂದರು.

# 2028 ಕ್ಕೆ ರಾಜ್ಯದಲ್ಲಿ ಮತ್ತೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ:

## ತುಮಕೂರನ್ನು ಉತ್ತರ ಬೆಂಗಳೂರು ಮಾಡಲು ಬದ್ಧ ಡಿಸಿಎಂ ಡಿ.ಕೆ.ಶಿ.



### ಸಾರ್ಥಕ ಸಾಮವೇಶದ ವೇಳೆ ಉಪ ಮುಖ್ಯಮಂತ್ರಿ ಭಾಷಣದ ಹೈಲೆಟ್ಸ್

2028 ಕ್ಕೆ ರಾಜ್ಯದಲ್ಲಿ ಮತ್ತೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ: ಡಿಸಿಎಂ ಡಿ.ಕೆ. ಶಿವಕುಮಾರ್
ಎಲ್ಲಾ ರಾಜ್ಯಗಳಿಂದಲೂ ಕಾಂಗ್ರೆಸ್ ಗ್ಯಾರಂಟಿ ಮಾದರಿ ಅನುಕರಣೆ
ಬಿಜೆಪಿ, ಬೇರೆ ಪಕ್ಷದವರೂ ಕಾಪಿ ಮಾಡಿದ್ದಾರೆ
ಆಕ್ಸ್‌ಫರ್ಡ್ ಯುನಿವರ್ಸಿಟಿಯವರೇ ಗ್ಯಾರಂಟಿ ಕೊಂಡಾಡಿದ್ದಾರೆ
ಕೊಟ್ಟ ಕುದುರೆ ಏರಲು ಆಗದ ಕುಮಾರಸ್ವಾಮಿ
17 ಜನಾನ ಇಟ್ಕೊಂಡು ಹರೀತಿನಿ, ಹರೀತಿನಿ ಅಂದ್ರೆ ಆಗುತ್ತಾ ಕುಮಾರಣ್ಣ?
ಮಾತು ಕೊಡೋದು ಮುಖ್ಯವಲ್ಲ, ಕೊಟ್ಟ ಮಾತು ಉಳಿಸಿಕೊಳ್ಳೋದು ಮುಖ್ಯ
ತುಮಕೂರು ಜಿಲ್ಲೆಯನ್ನು ಮತ್ತೊಂದು ಬೆಂಗಳೂರು ಮಾಡಲು ಬದ್ಧ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು, : "2028 ಕ್ಕೆ ಈ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಮತ್ತೆ ಅಧಿಕಾರಕ್ಕೆ ಬಂದೇ ಬರುತ್ತದೆ. ಜನತಾದಳ ಹಾಗೂ ಬಿಜೆಪಿಯವರು ಇದನ್ನು ಬರೆದಿಟ್ಟುಕೊಳ್ಳಿ. ಜನರು ಕೂಡ ಇದನ್ನು ನೆನಪಿನಲ್ಲಿಟ್ಟುಕೊಳ್ಳಿ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.ರಾಜ್ಯ ಸರ್ಕಾರಕ್ಕೆ ಮೂರು ವರ್ಷ ತುಂಬಿದ ಹಿನ್ನೆಲೆಯಲ್ಲಿ ತುಮಕೂರಿನಲ್ಲಿ ಮಂಗಳವಾರ ನಡೆದ 'ಸಾರ್ಥಕ ಸೇವೆಯ ಸಮರ್ಪಣೆ' ಸಮಾವೇಶದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

"ನಿಮ್ಮ ಕಾಂಗ್ರೆಸ್ ಸರ್ಕಾರ ರಾಜ್ಯದ ಜನರ ಬದುಕಿನಲ್ಲಿ ಬದಲಾವಣೆ ತಂದಿದೆ. ಇಡೀ ದೇಶಕ್ಕೆ ಒಂದು ಮಾದರಿ ಸರ್ಕಾರವನ್ನು ಕೊಟ್ಟಿದೆ, ಅದನ್ನು ಉಳಿಸಿಕೊಂಡು ಹೋಗುತ್ತೇವೆ. ನಿಮ್ಮ ಆಶೀರ್ವಾದ ಸದಾ ಇರಲಿ. ಪರಿಶ್ರಮ ಇದ್ದ ಕಡೆ ಇತಿಹಾಸ ಸೃಷ್ಟಿ ಆಗುತ್ತದೆ. ನಂಬಿಕೆ ಇದ್ದ ಕಡೆ ಅದ್ಭುತಗಳು ನಡೆಯುತ್ತವೆ. ಸತ್ಯ ಇದ್ದ ಕಡೆ ಗೆಲುವು ಇದ್ದೇ ಇರುತ್ತದೆ" ಎಂದು ಹೇಳಿದರು.

"ಆಕ್ಸ್‌ಫರ್ಡ್ ವಿಶ್ವವಿದ್ಯಾನಿಲಯದವರು ನಡೆಸಿದ ಅಧ್ಯಯನದ ಪ್ರಕಾರ, ಕರ್ನಾಟಕದ ಪಂಚ ಗ್ಯಾರಂಟಿಗಳು ಇಡೀ ವಿಶ್ವದಲ್ಲೇ ಬಡವರ ಬದುಕಿನಲ್ಲಿ ಸಾಮಾಜಿಕ ಬದಲಾವಣೆಯನ್ನು ತಂದಂತಹ ಕಾರ್ಯಕ್ರಮಗಳಾಗಿವೆ. ಇವು ವಿಶ್ವಕ್ಕೆ ಒಂದು ಮಾದರಿ" ಎಂದರು.

ಮೂರನೇ 3ನೇ ಪುಟಕ್ಕೆ



ಛಾಯಾಚಿತ್ರ ವಿವರ:- ತುಮಕೂರು ಜಿಲ್ಲೆಯಲ್ಲಿ ಕಂದಾಯ ಗ್ರಾಮದ 21,529 ಕುಟುಂಬಗಳಿಗೆ ಹಕ್ಕುಪತ್ರ ನೀಡಿ ಫೋಟೋ ಅಪ್‌ಲೋಡ್ ಮಾಡಿದ ಹಿನ್ನೆಲೆಯಲ್ಲಿ ಗಿನ್ನಿಸ್ ವರ್ಲ್ಡ್ ರೆಕಾರ್ಡ್ ದಾಖಲೆ ಸೇರಿದ ಹಿನ್ನೆಲೆಯಲ್ಲಿ ಮಂಗಳವಾರ ತುಮಕೂರಿನ ಜೂನಿಯರ್ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ ಸಾಧನಾ ಸೇವೆಗಳ ಸಮರ್ಪಣಾ ಸಮಾವೇಶದಲ್ಲಿ ಗಿನ್ನಿಸ್ ವರ್ಲ್ಡ್ ರೆಕಾರ್ಡ್ಸ್(ರಿ) ತೀರ್ಪುಗಾರ ಸ್ವಪ್ನಿಲ್‌ಡಂಗರಿಕರ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೂಲಕ ತುಮಕೂರು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರಿಗೆ ಗಿನ್ನಿಸ್ ಪ್ರಶಸ್ತಿಯನ್ನು ನೀಡಿದರು. ಈ ಸಂದರ್ಭದಲ್ಲಿ ಗೃಹ ಸಚಿವ ಡಾ: ಜಿ. ಪರಮೇಶ್ವರ, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಸಚಿವರಾದ ಹೆಚ್.ಕೆ.ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್, ಬಿ.ಝಡ್. ಜಮೀರ್ ಅಹಮದ್ ಖಾನ್ ಸೇರಿದಂತೆ ಇತರೆ ಸಚಿವರು, ಶಾಸಕರು ಹಾಗೂ ಗಿನ್ನಿಸ್ ವರ್ಲ್ಡ್ ರೆಕಾರ್ಡ್‌ನ ಸಲಹೆಗಾರರಾದ ಶೈಲಜಾ ಮತ್ತಿತರರು ಉಪಸ್ಥಿತರಿದ್ದರು.

# ತುಮಕೂರು ಜಿಲ್ಲೆಯಲ್ಲಿ ಒಂದೇ ದಿನ 600 ಮಂದಿಗೆ ಅಂಗನವಾಡಿ ನೇಮಕಾತಿ

## ಕೇಂದ್ರದ ಅಸಹಕಾರದ ಮಧ್ಯೆಯೂ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರದ ಅಪೂರ್ವ ಸಾಧನೆ ; ಲಕ್ಷ್ಮೀ ಹೆಬ್ಬಾಳ್ಕರ್

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು : ತುಮಕೂರು ಜಿಲ್ಲೆ ಒಂದರಲ್ಲೇ 600 ಅಂಗನವಾಡಿ ಕಾರ್ಯಕರ್ತರಿಗೆ ಮತ್ತು ಸಹಾಯಕಿಯರಿಗೆ ಒಂದೇ ದಿನ ನೇಮಕಾತಿ ಪತ್ರವನ್ನು ಕೊಡಲಾಗಿದ್ದು, ಇದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮಟ್ಟಿಗೆ ದಾಖಲೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ತುಮಕೂರಿನ ಸರ್ಕಾರಿ ಕಾಲೇಜು ಮೈದಾನದಲ್ಲಿ ನಡೆದ ರಾಜ್ಯ ಸರ್ಕಾರದ 3ನೇ ವರ್ಷದ ಸಾಧನಾ ಸಮಾವೇಶ ಮತ್ತು 1.52 ಲಕ್ಷ ಮಂದಿಗೆ ಕಂದಾಯ ಇಲಾಖೆಯಿಂದ ಹಕ್ಕುಪತ್ರ ವಿತರಣೆ ಕಾರ್ಯಕ್ರಮದಲ್ಲಿ ಸಚಿವರು ಮಾತನಾಡಿದರು.

ಇದಲ್ಲದೆ, ಇದೇ ವೇದಿಕೆಯ ಮೂಲಕ 106 ವಿವಿಧ ಕಾರ್ಯಕ್ರಮಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಮಾಡುತ್ತಿದ್ದೇವೆ ಎಂದು ಹೇಳಿದ ಸಚಿವರು, ಇವತ್ತು ಶಕ್ತಿ ಯೋಜನೆ, ಅನ್ನಭಾಗ್ಯ, ಗೃಹ ಜ್ಯೋತಿ, ಗೃಹಲಕ್ಷ್ಮಿ, ಯುವನಿಧಿ ಇವೆಲ್ಲವೂ ಮಹಿಳೆಯರನ್ನು ಕೇಂದ್ರವಾಗಿಟ್ಟು ಮಾಡಿರುವಂಥ ಯೋಜನೆಗಳು. ಇವೆಲ್ಲವೂ ಅತ್ಯಂತ ಯಶಸ್ವೀ ಯೋಜನೆಗಳಾಗಿ ಜನರ ಮನಸ್ಸು ತಟ್ಟಿದೆ. ಆದರೆ ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳನ್ನು ಟೀಕಿಸುವ ಬಿಜೆಪಿಯವರು, ಉತ್ತರ ಭಾರತದ ರಾಜ್ಯಗಳಲ್ಲಿ ಇದೇ ಕರ್ನಾಟಕದ ಮಾಡೆಲನ್ನು ಕಾಪಿ ಮಾಡಿಕೊಂಡು ಯೋಜನೆಗಳನ್ನು ರೂಪಿಸಿ ಚುನಾವಣೆ ಗೆಲ್ಲುತ್ತಿದ್ದಾರೆ. ಆದರೆ ಇಲ್ಲಿ ಮಾತ್ರ ತೋರಿಕೆಗಾಗಿ, ವಿರೋಧಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ಟೀಕಿಸುತ್ತಾರೆ ಎಂದರು.





ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಗಾಗಿ 60 ಸಾವಿರ ಕೋಟಿಯಷ್ಟು ಹಣ ಬಳಸುತ್ತಿದ್ದೇವೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದಲೇ ವರ್ಷಕ್ಕೆ 28 ಸಾವಿರ ಕೋಟಿ ಹಣ ಖರ್ಚು ಮಾಡುತ್ತಿದ್ದೇವೆ. ಇದರಿಂದ ಮಹಿಳೆಯರು ಆರ್ಥಿಕ ಶಕ್ತಿವಂತರಾಗಿದ್ದಾರೆ. ಗೃಹಲಕ್ಷ್ಮಿ ಕಾರಣದಿಂದ ನಮ್ಮ ಜೀವನ ಬದಲಾಗಿದೆ ಎಂದು ಹೇಳುತ್ತಿದ್ದಾರೆ. ಇದರಿಂದ ನಮಗೂ ಹೆಮ್ಮೆಯಾಗುತ್ತಿದೆ ಎಂದರು.

ಕೇಂದ್ರ ಸರ್ಕಾರದ ಅಸಹಕಾರದ ಮಧ್ಯೆಯೂ ರಾಜ್ಯ ಸರಕಾರ ಅಪೂರ್ವ ಸಾಧನೆ ಮಾಡುತ್ತಿದೆ. ಚುನಾವಣೆ ಪೂರ್ವ ನೀಡಿದ್ದ ವಚನವನ್ನು ಪಾಲಿಸುತ್ತಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಸಮಾರಂಭದಲ್ಲಿ ತುಮಕೂರು ಜಿಲ್ಲೆಯಲ್ಲಿ ಭೂರಹಿತ 1.52 ಲಕ್ಷ ಕುಟುಂಬಗಳಿಗೆ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಯಾಗಿ ಭೂ ಗ್ಯಾರಂಟಿ ಸಲುವಾಗಿ ಹಕ್ಕುಪತ್ರಗಳನ್ನು ವಿತರಿಸಲಾಯಿತು.

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ಸಚಿವರಾದ ಕೆಎಚ್ ಮುನಿಯಪ್ಪ, ಎಂ.ಬಿ. ಪಾಟೀಲ್, ಡಾ.ಜಿ. ಪರಮೇಶ್ವರ್, ಸತೀಶ್ ಜಾರಕಿಹೊಳಿ, ಜಮೀರ್ ಅಹ್ಮದ್, ಕೃಷ್ಣ ಭೈರೇಗೌಡ, ಎಚ್.ಸಿ ಮಹದೇವಪ್ಪ, ಬೈರತಿ ಸುರೇಶ್, ಎಚ್.ಕೆ ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು - ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

# ಜಾಗತಿಕ ಹೂಡಿಕೆದಾರರ ಸಮಾವೇಶದ ಮೂಲಕ ರಾಜ್ಯಕ್ಕೆ 10 ಲಕ್ಷದ 24 ಸಾವಿರ ಕೋಟಿ ರೂ, ಬಂಡವಾಳ

ಸೂರ್ಯಪ್ರಗತಿನ್ಯೂಸ್.ಕಾಂ

ಮೊದಲ ಬಾರಿಗೆ 650 ಅಂಗನವಾಡಿ ಕಾರ್ಯಕರ್ತೆಯರಿಗೆ ನೇಮಕಾತಿ ಆದೇಶ ನೀಡಿ ಇಂದು ಮತ್ತೊಂದು ದಾಖಲೆ ಸೃಷ್ಟಿಸಿದೆ ಎಂದು ತಿಳಿಸಿದರು. ದೇಶದ ಆರ್ಥಿಕ ವ್ಯವಸ್ಥೆಯಲ್ಲಿ ಕರ್ನಾಟಕವು ಮುಂಚೂಣಿಯಲ್ಲಿದ್ದು, ವಿದೇಶಿ ನೇರ ಹೂಡಿಕೆಯಲ್ಲಿ ದೇಶದಲ್ಲೇ ಎರಡನೇ ಸ್ಥಾನವನ್ನು ಕಾಯ್ದುಕೊಂಡಿದೆ. ಜಾಗತಿಕ ಹೂಡಿಕೆದಾರರ ಸಮಾವೇಶದ ಮೂಲಕ ರಾಜ್ಯಕ್ಕೆ 10 ಲಕ್ಷದ 24 ಸಾವಿರ ಕೋಟಿ ರೂಪಾಯಿಗಳ ಬಂಡವಾಳ ಹರಿದುಬಂದಿದೆ ಎಂದು ತಿಳಿಸಿದರು. "ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರು ನೀಡಿದ ಪ್ರತಿಯೊಂದು ಮಾತನ್ನು ಉಳಿಸಿಕೊಂಡಿದ್ದಾರೆ ಎಂದರು.

ಕಂದಾಯ ಸಚಿವ ಕೃಷ್ಣಬೈರೇಗೌಡ ಮಾತನಾಡಿ, ಕಳೆದ 16 ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ಹಾಗೂ ಅಸಾಧ್ಯವೆನಿಸಿದ್ದ ಕಂದಾಯ ಇಲಾಖೆಯ ಕೆಲಸ ಕಾರ್ಯಗಳನ್ನು ಇಂದು ಜನರ ಮನೆ ಬಾಗಿಲಿಗೆ ತಲುಪಿಸುವ ಮೂಲಕ ಕಂದಾಯ ಇಲಾಖೆಯು ಒಂದು ಕ್ರಾಂತಿಕಾರಿ ಬದಲಾವಣೆ ಮತ್ತು ಪರಿವರ್ತನೆಯನ್ನು ತರಲಾಗಿದೆ ಎಂದರು.

ಕಂದಾಯ ಇಲಾಖೆಯಲ್ಲಿ ಬಾವಿಯ ಆಳದಷ್ಟೇ ಕೆಲಸಗಳಿರುತ್ತವೆ. ಎಷ್ಟೇ ಕೆಲಸ ಮಾಡಿದರೂ ಇನ್ನೂ ಮಾಡಬೇಕಾದದ್ದು ಬಾಕಿ ಇರುತ್ತದೆ. ಸಾರ್ವಜನಿಕರ ಪ್ರೋತ್ಸಾಹ ಮತ್ತು ಶಕ್ತಿಯಿಂದ ಬಾಕಿ ಉಳಿದಿರುವ ಎಲ್ಲಾ ಕಂದಾಯ ಸೇವೆಗಳನ್ನು ಶೀಘ್ರದಲ್ಲೇ ಜನರ ಬಾಗಿಲಿಗೆ ತಲುಪಿಸಲು ನಮ್ಮ ಇಲಾಖೆ ಬದ್ಧವಾಗಿದೆ. ವಿಧಾನಸೌಧದಲ್ಲಿ ನಮಗೆ ದೊರೆತಿರುವ ಅಧಿಕಾರವು ಕೇವಲ ಆಡಳಿತ ನಡೆಸುವುದಕ್ಕಾಗಿ ಅಲ್ಲ. ಬದಲಿಗೆ ಸಾರ್ವಜನಿಕರ ಸೇವೆಗಾಗಿ ಎಂಬುದನ್ನು ಅರಿತಿದ್ದೇವೆ ಎಂದರು.



ರಾಜ್ಯದಲ್ಲಿನ ಲಂಬಾಣಿ ತಾಂಡಗಳು, ಗೊಲ್ಲರಹಟ್ಟಿ ಹಾಗೂ ನಾಯಕರ ಹಟ್ಟಿಗಳ ನಿವಾಸಿಗಳಿಗೆ ಶಾಶ್ವತ ನೆಲೆಯನ್ನು ತಲುಪಿಸುವ ನಿಟ್ಟಿನಲ್ಲಿ ಸರ್ಕಾರವು ಆಂದೋಲನದ ರೂಪದಲ್ಲಿ ಅವರ ಮನೆ ಬಾಗಿಲಿಗೆ ಹೋಗಿ ಹಕ್ಕುಪತ್ರ ವಿತರಿಸುವ ಐತಿಹಾಸಿಕ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸುತ್ತಿದೆ. ಹಿಂದೆ ಕೃಷಿ ಹಾಗೂ ಕೂಲಿ ಕಾರ್ಮಿಕರಾಗಿ ಊರಿನ ಹೊರಗಿನ ವಸತಿ ಪ್ರದೇಶಗಳಲ್ಲಿ ಜನರು ವಾಸಿಸುತ್ತಿದ್ದರು. ಅವರಿಗೆ ಯಾವುದೇ ಹಕ್ಕುಪತ್ರ ಇರಲಿಲ್ಲ. ಇಂದು ಕೃಷಿ ಮತ್ತು ಕೂಲಿ ಕಾರ್ಮಿಕರಿಗೆ ಹಕ್ಕುಪತ್ರವನ್ನು ನಮ್ಮ ಸರ್ಕಾರ ನೀಡುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕಂದಾಯ ಇಲಾಖೆಯ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನಾ ಸಮಾರಂಭಕ್ಕೆ ಮಾನ್ಯ ಮುಖ್ಯಮಂತ್ರಿಗಳು ಚಾಲನೆ ನೀಡಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಸಿದ್ದಪಡಿಸಿದ್ದ ಸರ್ಕಾರದ 3 ವರ್ಷಗಳ ಸಾಧನೆಗಳನ್ನು ಬಿಂಬಿಸುವ ಕಿರುಹೊತ್ತಿಗೆಯನ್ನು ಮುಖ್ಯಮಂತ್ರಿಗಳು ಬಿಡುಗಡೆ ಮಾಡಿದರು, ಕಂದಾಯ ಇಲಾಖೆಯ ಜನಪರ ಯೋಜನೆಗಳು ಹಾಗೂ ಸೌಲಭ್ಯಗಳ ವಿತರಣೆಯ ಮಾಹಿತಿಯನ್ನು ಒಳಗೊಂಡ ಬೃಹತ್ ವಸ್ತುಪ್ರದರ್ಶನವನ್ನು ಸಾರ್ವಜನಿಕರಿಗಾಗಿ ಆಯೋಜಿಸಲಾಗಿತ್ತು.

ಸಚಿವರುಗಳಾದ ಕೆ.ಹೆಚ್.ಮುನಿಯಪ್ಪ, ಹೆಚ್.ಕೆ.ಪಾಟೀಲ್, ಎಂ.ಬಿ.ಪಾಟೀಲ್, ಹೆಚ್.ಸಿ.ಮಹದೇವಪ್ಪ, ಸತೀಶ್ ಜಾರಿಕಿಹೊಳಿ, ಬಿ.ಝಡ್. ಜಮೀರ್ ಅಹಮದ್ ಖಾನ್, ಈಶ್ವರ ಖಂಡ್ರೆ, ಆರ್.ಬಿ.ತಿಮ್ಮಾಪುರ, ಕೆ.ವೆಂಕಟೇಶ್, ಶಿವಾರಾಜ್ ತಂಗಡಗಿ, ಸುರೇಶ್ ಬಿ.ಎಸ್. ಲಕ್ಷ್ಮೀ ಹೆಬ್ಬಾಳ್ಕರ್, ಮಂಕಾಳ ಎಸ್.ವೈದ್ಯ, ಮಧು ಬಂಗಾರಪ್ಪ, ಡಾ.ಎಂ.ಸಿ.ಸುಧಾಕರ್, ಎನ್. ಎಸ್.ಬೋಸರಾಜು, ಸರ್ಕಾರದ ಮುಖ್ಯಸಚೇತಕ ಸಲೀಂ ಅಹಮದ್ ಹಾಗೂ ಶಾಸಕರುಗಳು, ಸರ್ಕಾರದ ಅಪರ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿ ಶುಭಾ ಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಸಿಇಒ ಬಿ.ವಿ.ಅಶ್ವಿಜ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ "ಬಿಸಿನೆಸ್ ಟ್ಯಾಲೆಂಟ್ ಹಂಟ್" ಸ್ಪರ್ಧೆ–2026

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು:ನಗರದ ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯದ ಎಂ.ಬಿ.ಎ. ವಿಭಾಗದ ವತಿಯಿಂದ ಪದವಿ ವಿದ್ಯಾರ್ಥಿಗಳಿಗಾಗಿ "ಬಿಸಿನೆಸ್ ಟ್ಯಾಲೆಂಟ್ ಹಂಟ್" (Business Talent Hunt) –ಬಿಜ್ ಕ್ವಿಜ್ ರಸಪ್ರಶ್ನೆ, ವ್ಯವಹಾರ ಯೋಜನೆ, ನಿಧಿ ಹುಡುಕಾಟ, ಪಾತ್ರಾಭಿನಯ ಸ್ಪರ್ಧೆಯನ್ನು ಶ್ರೀದೇವಿ ಆಸ್ಪತ್ರೆಯ ಅಡಿಟೋರಿಯಂ ಸಭಾಂಗಣದಲ್ಲಿ ಮೇ20 ರಂದು (ಇಂದು) ಬುಧವಾರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ರಸಪ್ರಶ್ನೆಯಲ್ಲಿ ರಾಜ್ಯದ ನಾನಾ ಭಾಗದಿಂದ ಪದವಿ ಕಾಲೇಜುಗಳ (ಬಿ.ಬಿ.ಎಂ, ಬಿ.ಕಾಂ, ಬಿಎಸ್‌ಸಿ, ಬಿ.ಎ, ಬಿಸಿಎ) ವಿದ್ಯಾರ್ಥಿಗಳು ಸ್ಪರ್ಧಿಸಬಹುದು. ಒಂದು ತಂಡದಲ್ಲಿ ಇಬ್ಬರು ಸ್ಪರ್ಧಿಗಳಿರಬೇಕು. ಭಾಗವಹಿಸುವವರು ಕಾಲೇಜಿನ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ತರಬೇಕು. ಒಟ್ಟು 25,000 ಸಾವಿರ ನಗದು ಬಹುಮಾನ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಸ್ಪರ್ಧೆಗೆ ಭಾಗವಹಿಸಲು ಬೆಳಿಗ್ಗೆ 9 ಗಂಟೆಯಿಂದ ಸ್ಥಳದಲ್ಲಿಯೇ ನೋಂದಾಣಿ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಎಂ.ಆರ್.ಹುಲಿನಾಯ್ಕರ್‌ರವರು ವಹಿಸಲಿದ್ದಾರೆ. ಮುಖ್ಯಅತಿಥಿಗಳಾಗಿ ಬೆಂಗಳೂರಿನ ನಿಟ್ಟೆ ಸ್ಕೂಲ್ ಆಫ್ ಮ್ಯಾನೇಜ್ಮೆಂಟ್ ನಿರ್ದೇಶಕರಾದ ಡಾ.ಗುರುರಾಜ್.ಬಿ.ಅರಸ್‌ರವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಗೌರವ ಅತಿಥಿಗಳಾಗಿ ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆಯ ನಿರ್ದೇಶಕ ಹಾಗೂ ಟ್ರಸ್ಟಿ ಡಾ. ರಮಣ್ ಹುಲಿನಾಯ್ಕರ್, ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್.ಪಾಟೀಲ್, ಶ್ರೀದೇವಿ ಚಾರಿಟೇಬಲ್ ಟ್ರಸ್ಟಿ ಹಾಗೂ ನೇತ್ರತಜ್ಞೆ ಡಾ.ಲಾವಣ್ಯ, ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಅಂಬಿಕಾ ಎಂ ಹುಲಿನಾಯ್ಕರ್, ಹಾಗೂ ವಿವಿಧ ವಿಭಾಗಗಳ ಮುಖ್ಯಸ್ಥರು ಮತ್ತು ಬೋಧಕ– ಬೋಧಕೇತರ ಸಿಬ್ಬಂದಿಯವರು ಭಾಗವಹಿಸಲಿದ್ದಾರೆ.

## ರಸ್ತೆ ಅಪಘಾತಗಳಿಗೆ ಆಡಳಿತದ ನಿರ್ಲಕ್ಷ್ಯವೇ ಕಾರಣ : ಸಿಪಿಐ(ಎಂ) ತೀವ್ರ ಖಂಡನೆ



ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ–ಪಾವಗಡ ಪ್ರಮುಖ ರಸ್ತೆಯಲ್ಲಿ ನಿರಂತರವಾಗಿ ಸಂಭವಿಸುತ್ತಿರುವ ರಸ್ತೆ ಅಪಘಾತಗಳು ಹಾಗೂ ಜೀವಹಾನಿ ಪ್ರಕರಣಗಳಿಗೆ ಕೆ.ಶಿಪ್, ಮಹಾನಗರ ಪಾಲಿಕೆ ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಗಂಭೀರ ನಿರ್ಲಕ್ಷ್ಯವೇ ನೇರ ಕಾರಣವಾಗಿದೆ. ರಸ್ತೆಗಳ ದುರವಸ್ಥೆ, ಸಮರ್ಪಕ ರಸ್ತೆ ದೀಪಗಳ ಕೊರತೆ, ಎಚ್ಚರಿಕೆ ಹಾಗೂ ದಿಕ್ಕು ಸೂಚನಾ ಫಲಕಗಳಿಲ್ಲದಿರುವುದು, ರಸ್ತೆಯ ಮಧ್ಯೆ ಡಿವೈಡರ್ ವ್ಯವಸ್ಥೆ ಇಲ್ಲದಿರುವುದು ಹಾಗೂ ಮಳೆಗಾಲದಲ್ಲಿ ನೀರು ನಿಲ್ಲುವ ಸಮಸ್ಯೆಗಳಿಂದ ವಾಹನ ಸವಾರರು ಪ್ರತಿದಿನ ಜೀವ ಭಯದಲ್ಲೇ ಸಂಚರಿಸುವಂತಾಗಿದೆ ಎಂದು ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯ ಬಿ.ಉಮೇಶ್ ಖಂಡಿಸಿದರು.

ಸಾರ್ವಜನಿಕರ ಜೀವ ಭದ್ರತೆಯನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿರುವ ಸಂಬಂಧಿತ ಇಲಾಖೆಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಅಂತರಸನಹಳ್ಳಿ ಸೇತುವೆ ಬಳಿ ದಿನಾಂಕ: 16–05–2026 ರಂದು ಸಂಜೆ 5 ಗಂಟಗೆ ಪ್ರತಿಭಟನೆಯನ್ನು ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸ್ಥಳೀಯ ಮುಖಂಡ ಯಲ್ಲಪ್ಪ, "ಅಧಿಕಾರಿಗಳ ನಿರ್ಲಕ್ಷ್ಯದಿಂದ ಅಮಾಯಕ ಜನರು ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ರಸ್ತೆ ದೀಪಗಳ ಕೊರತೆಯಿಂದ ರಾತ್ರಿ ವೇಳೆ ವಾಹನ ಸಂಚಾರ ಅತ್ಯಂತ ಅಪಾಯಕಾರಿಯಾಗಿದೆ. ಕೂಡಲೇ ಹೆಚ್ಚಿನ ಬೆಳಕು ನೀಡುವ ರಸ್ತೆ ದೀಪಗಳನ್ನು ಅಳವಡಿಸಿ, ಅಪಾಯಕಾರಿ ಪ್ರದೇಶಗಳಲ್ಲಿ ಸುರಕ್ಷತಾ ಕ್ರಮ ಕೈಗೊಳ್ಳಬೇಕು. ಒಂದು ತಿಂಗಳೊಳಗೆ ಸಮಸ್ಯೆ ಪರಿಹರಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು" ಎಂದು ಎಚ್ಚರಿಸಿದರು.

ಜಿಲ್ಲಾ ಕಾರ್ಯದರ್ಶಿ ಎನ್.ಕೆ. ಸುಬ್ರಮಣ್ಯ ಮಾತನಾಡಿ, "ಇತ್ತೀಚೆಗೆ ನಡೆದ ದುರ್ಘಟನೆಯಲ್ಲಿ ಜೀವಹಾನಿಯಾಗಿರುವುದು ಸಾರ್ವಜನಿಕರಲ್ಲಿ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ಹಂಪ್ಸ್‌ಗಳಿಗೆ ರೇಡಿಯಂ ಸೂಚನಾ ಫಲಕಗಳಿಲ್ಲದಿರುವುದು ಹಾಗೂ ಎಚ್ಚರಿಕೆ ಫಲಕಗಳ ಕೊರತೆ ಅಪಘಾತಗಳಿಗೆ ಪ್ರಮುಖ ಕಾರಣವಾಗಿದೆ. ಸಂಬಂಧಿತ ಇಲಾಖೆಗಳು ತಕ್ಷಣ ಜಂಟಿ ಸಭೆ ನಡೆಸಿ ವೈಜ್ಞಾನಿಕ ರೀತಿಯಲ್ಲಿ ರಸ್ತೆ ದುರಸ್ತಿ ,ಬಸ್ ನಿಲ್ದಾಣ ಮತ್ತು ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕು" ಎಂದು ಒತ್ತಾಯಿಸಿದರು.

ಮಹಾನಗರ ಪಾಲಿಕೆ ಜೆ.ಇ. ಹರೀಶ್ ಮನವಿ ಸ್ವೀಕರಿಸಿ, ಆಯುಕ್ತರ ಗಮನಕ್ಕೆ ತಂದು ಸಂಬಂಧಿತ ಇಲಾಖೆಗಳ ಸಭೆ ನಡೆಸಿ ಸಮಸ್ಯೆ ಪರಿಹಾರಕ್ಕೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಇದೇ ವೇಳೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೂ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ನಗರ ಸಮಿತಿ ಸದಸ್ಯರಾದ ರಂಗಧಾಮಯ್ಯ, ಗೌಡ, ನಾಗರಿಕ ಹಿತರಕ್ಷಣಾ ಸಮಿತಿಯ ಶಿವಕುಮಾರ್, ರಾಮಕೃಷ್ಣ, ಖಲೀಲ್, ನಾಗಭೂಷಣ, ತಿಪ್ಪೇಸ್ವಾಮಿ, ಆನಂದ್, ಶಶಿಕಿರಣ್, ರಾಮಣ್ಣ,ಮಾಗರಾಜು,ಶ್ರೀನಿವಾಸ, ಸೇರಿದಂತೆ ಹಲವರು ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

## ಸ್ನೇಹ ಬಾಂಧವ್ಯವನ್ನು ಗಟ್ಟಿಗೊಳಿಸುವಲ್ಲಿ ಕ್ರಿಕೆಟ್ ಟೂರ್ನಮೆಂಟ್ ಗಳು

ಸೂರ್ಯಪ್ರಗತಿನ್ಯೂಸ್.ಕಾಂ

ಶಿರಾ : ಕಲ್ಲಹಳ್ಳಿ ಪ್ರೀಮಿಯರ್ ಲೀಗ್ ಕ್ರಿಕೆಟ್ ಪ್ರಥಮ ಬಹುಮಾನ ಬ್ರಹ್ಮಸಂದ್ರ ಕ್ರಿಕೆಟರ್ಸ್ , ದ್ವಿತೀಯ ಬಹುಮಾನ ಕಲ್ಲಹಳ್ಳಿ ಬಾಯ್ಸ್ ಪಡೆದರು, ಪ್ರಥಮ ಹದಿನೈದು ಸಾವಿರ ರೂಪಾಯಿ ಮತ್ತು ಕಪ್, ದ್ವಿತೀಯ ಬಹುಮಾನ ಹತ್ತು ಸಾವಿರ ಮತ್ತು ಕಪ್ ವಿತರಣೆ ಮಾಡಿ ಮಾತನಾಡಿದ ಜೆಡಿಎಸ್ ಯುವ ಮುಖಂಡ ಉಮೇಶ್ ಬಂಡಿಕಾರ

ಎಲ್ಲರನ್ನು ಒಗ್ಗೂಡಿಸಿ ಸ್ನೇಹ ಬಾಂಧವ್ಯವನ್ನು ಗಟ್ಟಿಗೊಳಿಸುವಲ್ಲಿ ಕ್ರಿಕೆಟ್ ಟೂರ್ನಮೆಂಟ್ ಗಳು ಸಹಕಾರಿ, ಗ್ರಾಮೀಣ ಪ್ರದೇಶದಲ್ಲಿ ಯುಗಾದಿ ಸಂಭ್ರಮದಲ್ಲಿ ಇಂತಹ ಕ್ರಿಕೆಟ್ ಟೂರ್ನಮೆಂಟ್ ಗಳು ಆಯೋಜನೆ ಮಾಡುವ ಮೂಲಕ ಗ್ರಾಮಗಳಲ್ಲಿ ಸಾಮರಸ್ಯ ಮೂಡಿಸುವುದು ನಮ್ಮ ಆದ್ಯ ಕರ್ತವ್ಯ ಎಂದರು.

ಅವರು ಶಿರಾ ತಾಲೂಕಿನ ಕಲ್ಲಹಳ್ಳಿ ಗ್ರಾಮದಲ್ಲಿ ಕಲ್ಲಹಳ್ಳಿ ಬಾಯ್ಸ್ ಯುವಕರ ತಂಡ ಆಯೋಜಿಸಿದ್ದ ಕಲ್ಲಹಳ್ಳಿ ಪ್ರೀಮಿಯರ್ ಲೀಗ್ ಕ್ರಿಕೆಟ್ ಟೂರ್ನಮೆಂಟ್ ನ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಹಂದಿಕುಂಟೆ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಈರೇಗೌಡ ಮಾತನಾಡಿ ಯುವಕರು ಕ್ರಿಕೆಟ್ ಬಗ್ಗೆ ಹೆಚ್ಚು ಆಸಕ್ತಿ ತೋರಿಸುತ್ತಿರುವುದು ಹರ್ಷದಾಯಕವಾಗಿದ್ದು, ಪ್ರತಿ ವರ್ಷ ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಿ ಗ್ರಾಮದಲ್ಲಿ ಹಬ್ಬದ ವಾತಾವರಣ ಮೂಡಿಸುವುದು ಯುವಕರ ಆದ್ಯತೆಯಾಗಬೇಕು ಎಂದರು.

ದ್ವಿತೀಯ ಬಹುಮಾನ ದಾನಿ ನರಸಿಂಹೇಗೌಡ, ಟ್ರೋಫಿ ದಾನಿ ಪ್ರಕಾಶ್ ಗೌಡ, ಮುಖಂಡರಾದ ಪಿಎಂಹಳ್ಳಿ ಬಾಬು , ಜಗನ್ ಗೌಡ, ಶಶಿಕುಮಾರ,

ಹಂದಿಕುಂಟೆ ಗ್ರಾಮ ಪಂಚಾಯತಿ ಮಾಜಿ ಸದಸ್ಯರಾದ ಈರೇಗೌಡ, ಪ್ರಥಮ ಬಹುಮಾನ( 15000) ಉಮೇಶ್ ಬಂಡಿಕಾರ, ದ್ವಿತೀಯ ಬಹುಮಾನ (10000)ನರಸಿಂಹೇಗೌಡ, ಟ್ರೋಫಿ ದಾನಿ ಪ್ರಕಾಶ್, ಕಿಟ್ ದಾನಿ ಅನಿಲ್, ಊಟ ಮತ್ತು ಶಾಮಿಯಾನ ಪಿ.ಎಂ ಹಳ್ಳಿ ಬಾಬು, ಬಾನು ಪ್ರಕಾಶ್, ಧನ ಸಹಾಯ ಜಗನ್ ಗೌಡ,ಆಯೋಜಕರು ಶಶಿ, ನಟರಾಜ್,ಈರಣ್ಣ, ಹಾಗೂ ಕಲ್ಲಹಳ್ಳಿ ಬಾಯ್ಸ್ ತಂಡದ ಹಲವಾರು ಯುವಕರು ಉಪಸ್ಥಿತರಿದ್ದರು,

## ನೊಂದವರ ಧ್ವನಿಯಾದ ಅಖಿಲ ಭಾರತ ದಲಿತ ಕ್ರಿಯಾ ಸಮಿತಿ – ಚೀ.ನಾ ರಾಮು

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು : ನೊಂದವರ ಧ್ವನಿಯಾಗಿ ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ಕಾರ್ಯ ನಿರ್ವಹಿಸುತ್ತಿದೆ ಎಂದು ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಚೀನಾ ರಾಮು ತಿಳಿಸಿದ್ದಾರೆ.

ಖಾಸಗಿ ಕಾರ್ಯಕ್ರಮದ ನಿಮಿತ್ತ ತುಮಕೂರಿಗೆ ಭೇಟಿ ನೀಡಿದ್ದ ಅವರು ತುಮಕೂರಿನ ಟೌನ್ ಹಾಲ್ ವೃತ್ತದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಗೌರವ ಸಲ್ಲಿಸಿ ಮಾತನಾಡಿದ ಅವರು ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೂ ದಲಿತ ಕ್ರಿಯಾ ಸಮಿತಿ ಸಂಘಟನೆಯು ನೊಂದವರ ಧ್ವನಿಯಾಗಿ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಇಡೀ ದೇಶದ ಮೂಲೆ ಮೂಲೆಗೂ ಭೇಟಿ ನೀಡಿ ನೊಂದವರ ಕಷ್ಟಕಾರ್ಪಣ್ಯಗಳನ್ನ ಅರಿತು ಸಂವಿಧಾನ ರಚಿಸಿದರು ಅವರ ಹೆಸರಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ನಮ್ಮ ಸಂಘಟನೆಯು ನಾಡಿನ ಉದ್ದಗಲಕ್ಕೂ ಕಾರ್ಯಕರ್ತರನ್ನ ನೇಮಿಸುವ ಮೂಲಕ ನಮ್ಮ ಸಂಘಟನೆಯನ್ನು ಬಲಪಡಿಸುವ ಕೆಲಸವನ್ನ ಸ್ಥಳೀಯ ಮುಖಂಡರಿಗೆ ನೀಡಲಾಗಿದೆ ಎಂದರು.



ಮೀಸಲಾತಿ ವರ್ಗೀಕರಣದಲ್ಲಿ ಘೋರ ಅನ್ಯಾಯವಾಗಿದ್ದು ಕೇವಲ ಉದ್ಯೋಗ ಮತ್ತು ಶಿಕ್ಷಣಕ್ಕಾಗಿ ಮಾತ್ರ ಮೀಸಲಾತಿ ವರ್ಗೀಕರಣವಾಗಿದೆ ಇದರ ಜೊತೆಯಲ್ಲಿ ರಾಜಕೀಯಕ್ಕೂ ಮೀಸಲಾತಿ ವರ್ಗೀಕರಣವಾಗಬೇಕಿದೆ. ಸಮಾಜದಲ್ಲಿ ಬಲಿಷ್ಠವಾಗಿ ಬೆಳೆದಿರುವ ಕೆ.ಎಚ್ ಮುನಿಯಪ್ಪ, ಮಲ್ಲಿಕಾರ್ಜುನ್ ಖರ್ಗೆ, ಡಾ. ಜಿ ಪರಮೇಶ್ವರ್ ರವರ ಅಂತಹ ವ್ಯಕ್ತಿಗಳಿಗೆ ಮೀಸಲಾತಿಯ ಅವಶ್ಯಕತೆ ಇಲ್ಲ ಅದರ ಬದಲಾಗಿ ನೊಂದವರು, ದೌರ್ಜನ್ಯಕ್ಕೆ ಒಳಗದವರು ಮುಖ್ಯವಾಹಿನಿಯಿಂದ ದೂರ ಇರುವ ವ್ಯಕ್ತಿಗಳಿಗೆ ಮೀಸಲಾತಿಯ ಅವಶ್ಯಕತೆ ಖಂಡಿತ ಇದೆ ಎಂದರು.

ಸರಿಯಾದ ರೀತಿಯಲ್ಲಿ ಮೀಸಲಾತಿ ವರ್ಗೀಕರಣ ವಾಗದೆ ಹೊರತು ನೊಂದವರು ನೊಂದವರಾಗಿಯೇ ಸಮಾಜದಲ್ಲಿ ಉಳಿಯುತ್ತಾರೆ ಎಂದು ತಿಳಿಸಿದರು.

ಇವರ ಭೇಟಿಯ ಹಿನ್ನಲೆಯಲ್ಲಿ ರಾಷ್ಟ್ರೀಯ ಅಧ್ಯಕ್ಷರಾದ ಚಿ.ನಾ.ರಾಮುರವರೊಂದಿಗೆ ರಾಜ್ಯ ಉಪಾಧ್ಯಕ್ಷರಾದ ಡಿ.ಕೆ. ಇಂದ್ರಕುಮಾರ್ ರವರು ತುಮಕೂರು ಜಿಲ್ಲಾ ಪ್ರವಾಸ ಮಾಡಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಹಲವಾರು ಜನರನ್ನು ಸಂಘಟನೆಯ ಸಂಪರ್ಕಕ್ಕೆ ತೆಗೆದುಕೊಳ್ಳಲಾಯಿತು, ಜೊತೆಗೆ ಮುಂದಿನ ದಿನಗಳಲ್ಲಿ ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯನ್ನು ತುಮಕೂರು ಜಿಲ್ಲೆಯಲ್ಲಿ ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ವಿವಿಧ ಯೋಜನೆಗಳನ್ನು ರೂಪಿಸಿರುವುದಾಗಿಯೂ ಸಹ ತಿಳಿಸಿದರು.

## "ಜನಸಂಪರ್ಕ ಸಭೆ. ಪೊಲೀಸರಿಗೆ ಸಾರ್ವಜನಿಕರ ಸಹಕಾರ ಅಗತ್ಯ

ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು : ನಗರದ ಸರ್ಕಾರಿ ನೌಕರರ ಸಂಘದ ಭವನದಲ್ಲಿ ನಗರ ಪೊಲೀಸ್ ಠಾಣೆಯವತಿಯಿಂದ ಜನ ಸಂಪರ್ಕ ಸಭೆಯನ್ನು ಆಯೋಜನೆ ಮಾಡಲಾಗಿತ್ತು. ಸಭೆಯಲ್ಲಿ ಸಾರ್ವಜನಿಕರಿಂದ ಹೆಲ್ಮೆಟ್, ಪಾರ್ಕಿಂಗ್ ಅವ್ಯವಸ್ಥೆಯ ಬಗ್ಗೆ, ವಿಲ್ಡಿಂಗ್ ಹಾವಳಿಯ ಬಗ್ಗೆ, ಸಂಚಾರಿ ದೀಪಗಳ ಅವ್ಯವಸ್ಥೆ ಹಾಗೂ ಗಾಂಜಾ ಸೇವನೆಯ ಬಗ್ಗೆ ದೂರುಗಳು ಬಂದವು.

ಪಂಚ ಗ್ಯಾರಂಟಿ ಯೋಜನೆ ತಾ ಅಧ್ಯಕ್ಷ ಮಡೆನೂರು ಕಾಂತರಾಜು ಮಾತನಾಡಿ ನಗರದಲ್ಲಿ ವಾಹನಗಳ ಪಾರ್ಕಿಂಗ್ ಸುವ್ಯವಸ್ಥೆಗಾಗಿ ಹಿಂದೆ ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿತ್ತು ಆದರೆ ಇಂದು ಅವ್ಯವಸ್ಥೆ ಹೆಚ್ಚಳವಾಗಿದೆ. ನಗರಸಬೆಯ ಮುಂಭಾಗ, ಹಾಗೂ ರೈಲ್ವೆ ಸ್ಟೇಷನ್ ರಸ್ತೆಯಲ್ಲಿ ವಾಹನಗಳು ರಸ್ತೆಬದಿಯಲ್ಲಿ ನಿಲ್ಲುಸುವುದರಿಂದ ಬೇರೆ ವಾಹನಗಳ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದೆ. ಸರಿಯಾದ ಮಾರ್ಗ ಸೂಚಿಗಳನ್ನು ಅಳವಡಿಸಿ ನಗರದಲ್ಲಿ ಹೆಲ್ಮೆಟ್ ಕಡ್ಡಾಯಗೊಳಿಸಬೇಕೆಂದರು.

ಹಳೇಪಾಳ್ಯ ಶ್ರೀನಿವಾಸ್ ಮಾತನಾಡಿ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯಿಂದ ರಸ್ತೆಯಲ್ಲಿ ನೀರು ನಿಲ್ಲುತ್ತಿದ್ದು ಸಂಚಾರಕ್ಕೆ ಬಹಳ ಸಮಸ್ಯೆಯಾಗುತ್ತಿದೆ. ರಾಮಶೆಟ್ಟಿಹಳ್ಳಿ, ಹುಚ್ಚಗೊಂಡನಹಳ್ಳಿ, ಮಂಜುನಾಥನಗರದ ಬಳಿ ರಾ




ಹೆ ಕಾಮಗಾರಿಯ ಅವ್ಯವಸ್ಥೆಯಿಂದ ಅಪಘಾತಗಳು ಸಂಬಂವಿಸಿ ಸಾವು ನೋವು ಉಂಟಾಗುತ್ತಿವೆ. ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ಸಲ್ಲಿಸಿದರೂ ಯಾವುದೇ ಪ್ರಯೋಜನವಿಲ್ಲ ಎಂದು ತಿಳಿಸಿದರು.

ಶಾರದನಗರ ಬೊರೆವೆಲ್ ಜಗದೀಶ್ ಮಾತನಾಡಿ ಶಾಲಾ ಸಮಯದ ವೇಳೆ ವಾಹನದ ದಟ್ಟನೆಯಿರುವುದರಿಂದ ಶಾಲಾ ಕಾಲೇಜುಗಳ ಗೇಟ್ ಬಳಿ ಬೆಳಗ್ಗೆ ಹಾಗೂ ಸಂಜೆಯ ಸಮಯದಲ್ಲಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜನೆ ಅವಶ್ಯಕತೆಯಿದೆ. ಹಾಗೂ ಇಲಾಖೆಯಿಂದ ಬರೀ ಜನಸಂಪರ್ಕ ಸಭೆಯನ್ನು ಆಯೋಜನೆ ಮಾಡುವುದರ ಜೊತೆಗೆ ಅನುಷ್ಠಾನ ಮಾಡಬೇಕು ಎಂದರು.

ಇದೇ ವೇಳೆ ಮಾತನಾಡಿದ ನಗರದ ವೃತ ನಿರೀಕ್ಷಕ ರವಿಕುಮಾರ್ ಪೊಲೀಸರಿಗೆ ಸಾರ್ವಜನಿಕರ ಸಹಕಾರ ಅತ್ಯಗತ್ಯ ಆಗ ಮಾತ್ರ ಸಮಾಜದಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲು ಸಾಧ್ಯವಾಗುತ್ತದೆ. ನಗರದಲ್ಲಿ ಜನಸಂಖ್ಯೆ ಹೆಚ್ಚಳವಿದ್ದು ವಾಹನಗಳ ಪಾರ್ಕಿಂಗ್ ಸಮಸ್ಯೆಗೆ ನಗರಸಭೆ ಅಧಿಕಾರಿಗಳ ಜೊತೆ ಮಾತನಾಡಿ ಒಂದು ಜಾಗ ಗುರುತಿಸಿ ಪಾರ್ಕಿಂಗ್ ವ್ಯವಸ್ಥೆ ಮಾಡಲು ನಾವು ಪ್ರಯತ್ನಿಸುತ್ತಿದ್ದೇವೆ ಅದೇ ರೀತಿ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸುತ್ತಿದ್ದು ಆದರೂ ಸಹ ಅಲ್ಲಿಯೇ ಮತ್ತೆ ವ್ಯಾಪಾರವನ್ನು ಮಾಡುತ್ತಿದ್ದಾರೆ ಹಂತ ಹಂತವಾಗಿ ರೈತರಿಗೂ ಹಾಗೂ ವಾಹನ ಸಂಚಾರಕ್ಕೂ ತೊಂದರೆಯಾಗದಂತೆ ನಿಗಾ ವಹಿಸಲಾಗುವುದು

ತಿಪಟೂರಿನಲ್ಲಿ ಗಾಂಜಾ ಮತ್ತು ಮಟ್ಕಾ ಗಳ ಬಗ್ಗೆ ದೂರುಗಳು ಬಂದಿದ್ದು ಅಂತಹ ಪ್ರಕರಣಗಳು ಕಂಡು ಬಂದಲ್ಲಿ ಸಾರ್ವಜನಿಕರು ನಮಗೆ ಮಾಹಿತಿ ನೀಡಿದಲ್ಲಿ ಸಂಪೂರ್ಣವಾಗಿ ನಶಮುಕ್ತ ನಗರವಾಗಿ ಕ್ರಮ ಕೈಗೊಳ್ಳಲಾಗುವುದು ಈಗಾಗಲೇ 5 ಗಾಂಜಾ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದ್ದು 260ಗ್ರಾಂ ಗಾಂಜಾ ವಶಪಡಿಸಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಸಬ್ ಇನ್ಸ್ಪೆಕ್ಟರ್ ಯತೀಶ್, ಟಿ.ಕೆ. ಕುಮಾರ್, ಇಮ್ರಾನ್, ಕಿರಣ್, ಶಂಕರಮೂರ್ತಿ, ಶಾಂತಪ್ಪ, ಮಂಜುನಾಥ್, ಕಿಶೋರ್, ವಿದ್ಯಾ, ಸೇರಿದಂತೆ ಪೊಲೀಸ್ ಸಿಬ್ಬಂದಿ ನೂರಾರು ಸಾರ್ವಜನಿಕರು ತಮ್ಮ ಅಹವಾಲುಗಳನ್ನು ತಿಳಿಸಿದರು."

## ಗಂಗಸಂದ್ರ ಕೆರೆಯಲ್ಲಿ ಪಕ್ಷಿಗಳಿಗೆ ಕಿರುಕುಳ

ತುಮಕೂರು:ಬೇಸಿಗೆಯಲ್ಲಿಕೆರೆಗಳಲ್ಲಿನೀರು ಕಡಿಮೆಯಾದಂತೆ ಸಣ್ಣ ಸಣ್ಣ ದ್ವೀಪಗಳು ನಿರ್ಮಾಣವಾಗುತ್ತವೆ. ಇದಕ್ಕಾಗೇ ಕಾಯುತ್ತಿರುವಂತೆ ಕಾಣುವ ನೆಲದ ಮೇಲೆ ಮೊಟ್ಟೆ ಇಟ್ಟು ಮರಿ ಮಾಡಿ ಸಂತಾನೋತ್ಪತಿ ಮಾಡುವ ಪಕ್ಷಿಗಳಾದ ರಿವರ್‌ಟನ್, ಕಾಮನ್ ಸ್ಟಿಲ್ಟ್, ಲಿಟ್ಲ್‌ರಿಂಗ್ ಪ್ಲೋವರ್, ಪ್ರಾಟೀನ್‌ಕೋಲ್, ಲಾಪ್‌ಲಿಂಗ್ ಸೇರಿದಂತೆ ಹಲವು ಪಕ್ಷಿಗಳು ತುಮಕೂರಿನ ಗಂಗಸಂದ್ರ ಕೆರೆಯಲ್ಲಿ ಮುಂಗಾರು ಮಳೆಗೂ ಮುನ್ನ ಸಂತಾನೋತ್ಪತಿ ಕ್ರಿಯೆಯಲ್ಲಿ ತೊಡಗಿ, ಆಹಾರ ತಂದುಕೊಟ್ಟು ಮರಿಗಳ ಹಾರೈಕೆ ಮಾಡುವುದನ್ನು ತುಮಕೂರಿನ ಹೊರಪೇಟೆಯಲ್ಲಿರುವ ಗಜಾನನ ಸ್ಪೆಷಾಲಿಟಿ ಸೆಂಟರ್‌ನ ಡಾ॥ ಉಮಾಶಂಕರ್, ಆಯುರ್ವೇದ ಭವನದ ಸುಬ್ರಮಣ್ಯ ಅಡಿಗ, ಚಂದುಬಾಬು, ತಮ್ಮ ಕ್ಯಾಮರಾಗಳಲ್ಲಿ ಸೆರೆಹಿಡಿದಿದ್ದಾರೆ.



ಗಂಗಸಂದ್ರ ಕೆರೆಯ ಮಧ್ಯೆ ಸಣ್ಣ ದ್ವೀಪಗಳ ನೆಲದ ಮೇಲೆ ಈ ಪಕ್ಷಿಗಳು ಇಟ್ಟಿರುವ ಮೊಟ್ಟೆಗಳ ಅರಿವಿಲ್ಲದೆ ಕೆಲ ಪುಂಡ ಹುಡುಗರು ಮದ್ಯಪಾನ ಮಾಡುವುದು, ಬೈಕ್ ಓಡಿಸುವುದು ಜೊತೆಗೆ ಪ್ರೀ ವೆಡ್ಡಿಂಗ್ ಶೂಟ್ ಮಾಡುವುದರ ಮೂಲಕ ಪಕ್ಷಿಗಳ ಸ್ವಾಭಾವಿಕ ಚಲನ ವಲನಕ್ಕೆ ಅಡ್ಡಿಯುಂಟು ಮಾಡುತ್ತಿದ್ದಾರೆ ಎಂದು ಈ ಮೇಲಿನ ಪಕ್ಷಿ ಪ್ರಿಯರು ದೂರಿ ಆತಂಕ ವ್ಯಕ್ತಪಡಿಸಿದ್ದಾರೆ.

ಕೆರೆಗಳು ಮನುಷ್ಯನ ಜೀವನೋಪಾಯಕ್ಕೆ ಎಷ್ಟು ಮುಖ್ಯವೋ, ಪ್ರಾಣಿ ಪಕ್ಷಿಗಳ ಆವಾಸ ಸ್ಥಾನಕ್ಕೂ ಅಷ್ಟೇ ಮುಖ್ಯ ಎಂಬುದು ಗಮನಾರ್ಹ ಎಂದಿರುವ ಗಜಾನನ ಸ್ಪೆಷಾಲಿಟಿ ಸೆಂಟರ್‌ನ ಡಾ॥ ಉಮಾಶಂಕರ್, ಆಯುರ್ವೇದ ಭವನದ ಸುಬ್ರಮಣ್ಯ ಅಡಿಗ, ಚಂದುಬಾಬು, ಕೆರೆಗಳಲ್ಲಿನ ಜೀವವೈವಿಧ್ಯತೆಯನ್ನು ಕಾಪಾಡಲು ಸಂಬಂಧಪಟ್ಟ ಇಲಾಖೆಯವರು ಮತ್ತು ಜಿಲ್ಲಾಡಳಿತ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಮೂಲಕ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

# ವೈಜ್ಞಾನಿಕ ಆವಿಷ್ಕಾರ ಮತ್ತು ವ್ಯಾಪಾರ ನಿಖರವಾದ ಅಳತೆಯೇ ಮಾಪನಶಾಸ್ತ್ರ

ವೈಜ್ಞಾನಿಕ ಆವಿಷ್ಕಾರಗಳು ಮತ್ತು ವ್ಯಾಪಾರದಲ್ಲಿ ನಿಖರವಾದ ಅಳತೆಗಳ ಮಾಪನಶಾಸ್ತ್ರ ಅಗತ್ಯ ವಿಶ್ವ ಮಾಪನಶಾಸ್ತ್ರ ದಿನವನ್ನು ಪ್ರತಿ ವರ್ಷವು ಮೇ 20 ರಂದು ಆಚರಿಸಲಾಗುತ್ತದೆ. ಮಾಪನಶಾಸ್ತ್ರದ ಮಹತ್ವವನ್ನು ಹೆಚ್ಚಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಮಾಪನಶಾಸ್ತ್ರ ದಿನವನ್ನು ಮಾಪನ ಮಾನದಂಡಗಳ ಪ್ರಯೋಗಾಲಯ (ಎಂ.ಎಸ್.ಎಲ್) ಪ್ರೇರೇಪಿಸುತ್ತದೆ. ಸುಮಾರು ಹದಿನೇಳು ರಾಷ್ಟ್ರಗಳು ಮೇ 20, 1875 ರಂದು ವಿಶ್ವ ಮಾಪನಶಾಸ್ತ್ರ ದಿನವನ್ನು ಆಚರಿಸಿದವು. ಮಾಪನಶಾಸ್ತ್ರವು ವಾತಾವರಣದ ಅಧ್ಯಯನವಲ್ಲದೆ ಬೇರೆಯಾವುದಿಲ್ಲ. ಮಾಪನಶಾಸ್ತ್ರ ದಿನ 2026 ಅನ್ನು ವಿಶ್ವ ಹವಾಮಾನ ಸಂಸ್ಥೆ (ಡ್ಬ್ಯೂಎಂಓ) ಆಯೋಜಿಸಿದೆ. ವಿಶ್ವ ಮಾಪನಶಾಸ್ತ್ರ ದಿನದಂದು, ವಾತಾವರಣದ ಮಹತ್ವವನ್ನು ತೋರಿಸಲು ಹಲವಾರು ಚಟುವಟಿಕೆಗಳು ಮತ್ತು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.






ಪ್ರತಿಯೊಬ್ಬರ ದೈನಂದಿನ ಜೀವನ, ವೈಜ್ಞಾನಿಕ ಆವಿಷ್ಕಾರಗಳು ಮತ್ತು ಅಂತರರಾಷ್ಟ್ರೀಯ ವ್ಯಾಪಾರದಲ್ಲಿ ನಿಖರವಾದ ಅಳತೆಗಳ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಮೀಸಲಿಡಲಾಗಿದೆ. ಜಿಪಿಎಸ್ ನ್ಯಾವಿಗೇಷನ್‌ನಿಂದ ವೈದ್ಯಕೀಯ ಡೋಸ್‌ಗಳು ಮತ್ತು ನಿರ್ಮಾಣ ಸುರಕ್ಷತೆಯವರೆಗೆ, ಮಾಪನಶಾಸ್ತ್ರವು ವಿಶ್ವದ್ಯಾದ್ಯಂತ ಸ್ಥಿರತೆ ಮತ್ತು ವಿಶ್ವಾಸಾರ್ಹತೆಯನ್ನು ಖಚಿತಪಡಿಸುತ್ತದೆ. ಮೆಟ್ರಿಕ್ ವ್ಯವಸ್ಥೆಯು ಜಾಗತಿಕ ಸಹಯೋಗವನ್ನು ಸಕ್ರಿಯಗೊಳಿಸುತ್ತದೆ.

ಮಾಪನಶಾಸ್ತ್ರ (Metrology) ಎಂದರೆ ಅಳತೆಗಳಿಗೆ ಸಂಬಂಧಿಸಿದ ವೈಜ್ಞಾನಿಕ ಅಧ್ಯಯನ. ಇದು ತೂಕ, ಉದ್ದ, ಉಷ್ಣತೆ, ಕಾಲ ಮುಂತಾದ ಭೌತಿಕ ಪ್ರಮಾಣಗಳ ಅಳತೆಗಳನ್ನು ನಿಖರವಾಗಿ ಮತ್ತು ಅಂತಾರಾಷ್ಟ್ರೀಯ ಮಾನದಂಡಗಳಿಗೆ ಅನುಗುಣವಾಗಿ ವ್ಯಾಖ್ಯಾನಿಸುವುದು, ಅಭಿವೃದ್ಧಿಪಡಿಸುವುದು ಮತ್ತು ಕಾರ್ಯಗತಗೊಳಿಸುವುದನ್ನು ಒಳಗೊಂಡಿದೆ.

ಮಾಪನಶಾಸ್ತ್ರ ಮೂರು ವಿಭಾಗಗಳಾಗಿ ವಿಂಗಡಿಸಲಾಗಿದೆ:

1. ವೈಜ್ಞಾನಿಕ ಮಾಪನಶಾಸ್ತ್ರ: ಇದು ಮಾಪನದ ಹೊಸ ಮಾನದಂಡಗಳ ಸಂಶೋಧನೆ ಮತ್ತು ಅಭಿವೃದ್ಧಿಗೆ ಸಂಬಂಧಿಸಿದೆ.
2. ಕೈಗಾರಿಕಾ ಮಾಪನಶಾಸ್ತ್ರ: ಇದು ಕೈಗಾರಿಕೆಗಳಲ್ಲಿ ಬಳಸುವ ಉಪಕರಣಗಳು ನಿಖರವಾಗಿರುವುದನ್ನು ಮತ್ತು ಗುಣಮಟ್ಟವನ್ನು ಕಾಪಾಡಿಕೊಳ್ಳುವುದನ್ನು ಖಚಿತಪಡಿಸುತ್ತದೆ.
3. ಕಾನೂನು ಮಾಪನಶಾಸ್ತ್ರ: ವ್ಯಾಪಾರ ಮತ್ತು ವಹಿವಾಟಿನಲ್ಲಿ ಬಳಸುವ ತೂಕ ಮತ್ತು ಅಳತೆಗಳ ನಿಖರತೆಯನ್ನು ಖಾತ್ರಿಪಡಿಸುವ ಮೂಲಕ ಗ್ರಾಹಕರ ಹಿತಾಸಕ್ತಿಗಳನ್ನು ರಕ್ಷಿಸುವ ಸರ್ಕಾರಿ ವಿಭಾಗವಾಗಿದೆ.

ಮಾಪನಶಾಸ್ತ್ರ ಎಂದರೇನು:

ಮಾಪನಶಾಸ್ತ್ರವು ಮಾಪನದ ವೈಜ್ಞಾನಿಕ ಅಧ್ಯಯನವಾಗಿದೆ. ಇದು ಘಟಕಗಳು ಮತ್ತು ಅಳತೆ ಸಾಧನಗಳಿಗೆ ಸಾಮಾನ್ಯ ಮಾನದಂಡಗಳನ್ನು ಹೊಂದಿಸಲು ನಮಗೆ ಅನುವು ಮಾಡಿಕೊಡುತ್ತದೆ. ಮಾಪನಶಾಸ್ತ್ರವು ಸಂಚರಣೆ, ನಿರ್ಮಾಣ, ಉತ್ಪನ್ನ ಅಭಿವೃದ್ಧಿ, ಪರಿಸರ ಮೇಲ್ವಿಚಾರಣೆ, ಔಷಧ ಮತ್ತು ಆಹಾರ ಸಂಸ್ಕರಣೆ ಸೇರಿದಂತೆ ವ್ಯಾಪಕ ಶ್ರೇಣಿಯ ಅನ್ವಯಿಕೆಗಳನ್ನು ಹೊಂದಿದೆ.

ವಿಶ್ವ ಮಾಪನಶಾಸ್ತ್ರ ದಿನದ ಇತಿಹಾಸ

ಮೊದಲ ವಿಶ್ವ ಮಾಪನಶಾಸ್ತ್ರ ದಿನವನ್ನು 1961 ರಲ್ಲಿ ನಡೆಸಲಾಯಿತು. ವಿಶ್ವ ಹವಾಮಾನ ಸಂಸ್ಥೆ 1950 ರಲ್ಲಿ ಜಾರಿಗೆ ಬಂದಿತು. ವಿಶ್ವ ಮಾಪನಶಾಸ್ತ್ರ ದಿನವು 1875 ರಲ್ಲಿ ಫ್ರಾನ್ಸ್ ಪ್ಯಾರಿಸ್‌ನಲ್ಲಿ ನಡೆದ ಪ್ರಸಿದ್ಧ ಮೀಟರ್ ಸಮಾವೇಶವನ್ನು ಸ್ಮರಿಸುತ್ತದೆ. ಸಮಾವೇಶದ ನಂತರ, ಮಾಪನಶಾಸ್ತ್ರದ ಮಹತ್ವವನ್ನು ಖಚಿತಪಡಿಸಿಕೊಳ್ಳಲು ಬ್ಯೂರೋ ಇಂಟರ್ ನ್ಯಾಷಿನಲ್ ಡೆಸ್ ಪಾಯ್ಡ್ ಎಟ್ ಮೆಷರ್ಸ್ (BIPM) ಮತ್ತು ಅಂತರರಾಷ್ಟ್ರೀಯ ಕಾನೂನು ಮಾಪನಶಾಸ್ತ್ರ ಸಂಸ್ಥೆ (OIML) ಗಳನ್ನು ಸ್ಥಾಪಿಸಲಾಯಿತು. ಜನರ ಆರೋಗ್ಯ ಮತ್ತು ಸುರಕ್ಷತೆಗೆ ವಿಶ್ವ ಹವಾಮಾನ ಸಂಸ್ಥೆಯ ಕಾರ್ಯವು ಮುಖ್ಯವಾಗಿದೆ.



ಲೇಖಕರು: ಎನ್.ಆನಂದ್
ತುಮಕೂರು, 9590578892

# ಹಿರಿಯ ಕಾಂಗ್ರೆಸ್ ಮುಖಂಡ ಸೈಯದ್ ಜಿಯಾ ಉಲ್ಲಾ ವಿಧಿವಶ; ಪಕ್ಷದ ದೊಡ್ಡ ಆಧಾರ ಸ್ಥಂಭವನ್ನು ಕಳೆದುಕೊಂಡಂತಾಗಿದೆ ಡಿಕೆಶಿ

ಸೂರ್ಯಪ್ರಗತಿನ್ಯೂಸ್.ಕಾಂ





ರಾಮನಗರ : ರಾಮನಗರ ಪುರಸಭೆ ಅಧ್ಯಕ್ಷರು, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಸಂಘಟನೆಗೆ ವಿವಿಧ ಹಂತಗಳಲ್ಲಿ ದುಡಿದಿದ್ದ ಹಿರಿಯ ಮುಖಂಡ ಹಾಜಿ ಸೈಯದ್ ಜಿಯಾ ಉಲ್ಲಾ (78) ಮಂಗಳವಾರ ನಿಧನರಾಗಿದ್ದಾರೆ.

ಮೃತರು ಪತ್ನಿ, ನಗರಸಭೆ ಸದಸ್ಯ ಅಕ್ಲಿಂ ಪಾಷಾ ಸೇರಿದಮತೆ ನಾಲ್ವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗ ಹಾಗೂ ಅಭಿಮಾನಿಗಳನ್ನು ಅಗಲಿದ್ದಾರೆ.

ಪುರಸಭೆ ಅಧ್ಯಕ್ಷರಾಗಿದ್ದ ವೇಳೆ ನಗರದಲ್ಲಿ ಸಾರ್ವಜನಿಕರ ಉಪಯೋಗಕ್ಕಾಗಿ ಸುಸಜ್ಜಿತ ಸಭಾಂಗಣ ನಿರ್ಮಿಸಬೇಕು ಎಂಬ ಉದ್ದೇಶ ಹೊಂದಿದ್ದ ಸೈಯದ್ ಜಿಯಾ ಉಲ್ಲಾ ಆರ್ಥಿಕ ಸಂಪನ್ಮೂಲ ಕ್ರೂಢಿಕರಣಕ್ಕಾಗಿ ಡಾ.ರಾಜ್ ಕುಮಾರ್ ಅವರ ರಸಸಂಜೆ ಕಾರ್ಯಕ್ರಮ ಹಮ್ಮಿಕೊಂಡಿದ್ದರು. ಕಾರ್ಯಕ್ರಮದಿಂದ ಬಂದ ಟಿಕೆಟ್ ಹಣವನ್ನು ಬಳಸಿಕೊಂಡು ಡಾ.ಬಿ.ಆರ್.ಅಂಬೇಡ್ಕರ್ ಭವನ ನಿರ್ಮಿಸಿದ್ದರು.

ನಗರ ಬೆಳೆಯಲಿದೆ ಎಂಬ ದೂರದೃಷ್ಟಿಯಿಂದ ಅರ್ಕಾವತಿ ನದಿ ದಂಡೆಯ ಮೇಲೆ ಕೇಂದ್ರ ಸರ್ಕಾರದ ಅನುದಾನದಲ್ಲಿ ಬೃಹತ್ ವಾಣಿಜ್ಯ ಸಂಕೀರ್ಣ (ಡಾ.ರಾಜ್‌ಕುಮರ್ ಕಾಂಪ್ಲೆಕ್ಸ್) ನಿರ್ಮಿಸಲು ಕಾರಣಕರ್ತರಾಗಿದ್ದಾರೆ.

ಪುರಸಭೆ ಅಧ್ಯಕ್ಷರಾಗಿ ಅವರು ನೀಡಿದ ದಕ್ಷ ಆಡಳಿತವನ್ನು ಗಮನಿಸಿದ ರಾಜ್ಯ ಸರ್ಕಾರ ಉತ್ತಮ ಪುರಸಭೆ ಎಂದು ನೀಡಿದ ಬಹುಮಾನದ ಹಣವನ್ನು ಬಳಸಿಕೊಂಡು ಪ್ರಶಸ್ತಿ ಭವನವನ್ನು ನಿರ್ಮಿಸಿದ ಕೀರ್ತಿ ಇವರಿಗಿದೆ.

ಇವರ ಆಡಳಿತಾವಧಿಯಲ್ಲಿ ನಿವೇಶನ ರಹಿತ ಬಡಕುಟುಂಬಗಳಿಗೆ ನಿವೇಶನಗಳನ್ನು ವಿತರಿಸಿದ್ದರು. ನಗರದ ಸ್ವಚ್ಛತೆಗೆ ಅವರು ಆದ್ಯತೆ ನೀಡಿದ್ದರು. ಕುಡಿಯುವ ನೀರಿನ ಬವಣೆ ನೀಗಿಸಲು ಶ್ರಮಿಸಿದ್ದರು.

ಕಾಂಗ್ರೆಸ್ ಪಕ್ಷವನ್ನು ಕಟ್ಟಲು ಶ್ರಮಿಸಿದ್ದ ಇವರ ಪಕ್ಷ ಸೇವೆಯನ್ನು ಗುರುತಿಸಿ ಕಾಂಗ್ರೆಸ್ ಪಕ್ಷ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹುದ್ದೆಯನ್ನು ನೀಡಿತ್ತು.

ಸೈಯದ್ ಜಿಯಾರನ್ನು ಎಂ.ಎಲ್.ಸಿ ಮಾಡುವ ಭರವಸೆಯನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಚುನಾವಣೆ ಬಂದಾಗಲೆಲ್ಲಾ ನೀಡುತ್ತಲೇ ಇದ್ದರು. ಕೆ.ಎಸ್.ಐ.ಸಿ ಅಧ್ಯಕ್ಷರಾಗಿ ಕರ್ತವ್ಯ ನಿರ್ವಹಿಸಿದ್ದ ವೇಳೆ ಜಿಯಾ ಉಲ್ಲಾ ಅವರು ಮೈಸೂರು ಸಿಲ್ಕ್ ಸೀರೆಗಳ ಪ್ರಚಾರಕ್ಕಾಗಿ ಹಲವಾರು ಕ್ರಮಗಳನ್ನು ಕೈಗೊಂಡಿದ್ದರು. ಜೀವನಕ್ಕಾಗಿ ಸ್ವತಃ ರೇಷ್ಮೆ ರೀಲರ್ ವೃತ್ತಿಯನ್ನು ಅನುಸರಿಸಿದ್ದ ಜಿಯಾವುಲ್ಲಾ, ಬಹುಶಃ ಜಿಲ್ಲೆಯಲ್ಲೇ ಪ್ರಥಮ ಬಾರಿಗೆ ಅತ್ಯಾಧುನಿಕ ತಂತ್ರಜ್ಞಾನದ ರೇಷ್ಮೆ ರೀಲಿಂಗ್ ಯಂತ್ರವನ್ನು ಅಳವಡಿಸಿಕೊಂಡಿದ್ದರು.

ರೇಷ್ಮೆ ಉದ್ಯಮಿಯಾಗಿ, ರಾಜಕೀಯವಾಗಿ ಯಶಸ್ಸು ಸಾಧಿಸಿರುವ ಸೈಯದ್ ಜಿಯಾವುಲ್ಲಾ ಅವರನ್ನು ನಗರದ ಎಲ್ಲಾ ಧರ್ಮೀಯರ ವಿಶ್ವಾಸ ಗಳಿಸಿದ್ದರು. ಇಸ್ಲಾಂ ಧರ್ಮದ ಪದ್ಧತಿಯಂತೆ ಅವರ ಅಂತ್ಯ ಸಂಸ್ಕಾರ ನಗರದಲ್ಲಿ ನೆರವೇರಿದೆ.

ಡಿಸಿಎಂ ಡಿ.ಕೆ.ಶಿವಕುಮಾರ್, ಮಾಜಿ ಸಂಸದ ಡಿ.ಕೆ.ಸುರೇಶ್, ಶಾಸಕ ಇಕ್ಬಾಲ್ ಹುಸೇನ್, ನಗರಸಭಾಧ್ಯಕ್ಷ ಕೆ.ಶೇಷಾದ್ರಿ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಾಣಕಲ್ ನಟರಾಜ್, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಯರೇಹಳ್ಳಿ ಮಂಜು, ಟಿಎಪಿಸಿಎಂಎಸ್ ಅಧ್ಯಕ್ಷ ಎಸ್.ಸುರೇಶ್ ಮುಂತಾದ ಗಣ್ಯರು, ಸಮಾಜದ ಎಲ್ಲಾ ವರ್ಗದ ಪ್ರಮುಖರು ಸೈಯದ್ ಜಿಯಾ ಉಲ್ಲಾ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದುಕೊಂಡರು.

### ಸೈಯದ್ ಜಿಯಾ ಉಲ್ಲಾ ನಿಧನದಿಂದ ಆಘಾತ : ಡಿಕೆಶಿ

ಹಿರಿಯ ಮುಖಂಡ ಜಿಯಾ ಉಲ್ಲಾ ಅವರ ನಿಧನದಿಂದ ಪಕ್ಷದ ದೊಡ್ಡ ಆಧಾರ ಸ್ಥಂಭವನ್ನು ಕಳೆದುಕೊಂಡಂತಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಂಬನಿ ಮಿಡಿದಿದ್ದಾರೆ. ಜಿಯಾ ಉಲ್ಲಾ ಅವರನ್ನು 40 ವರ್ಷಗಳಿಂದ ನೋಡಿದ್ದೇನೆ. ಅನೇಕ ನಾಯಕರನ್ನು ಅವರು ತಯಾರು ಮಾಡಿದ್ದಾರೆ. ನನ್ನ ಮೇಲೆ ಅಪಾರ ಪ್ರೀತಿ ಇಟ್ಟಿದ್ದರು. ಎಂಎಲ್‌ಸಿ ಮಾಡುವ ಭರವಸೆಯನ್ನು ನೀಡಿದ್ದೆ, ಆದರೆ ಸಾಧ್ಯವಾಗಲಿಲ್ಲ ಎಂದು ವಿಷಾದಿಸಿದರು.

ಜಿಯಾ ಅವರ ಸಾವು ವೈಯಕ್ತಿಕವಾಗಿ ನನಗೆ ಆಘಾತವನ್ನುಂಟು ಮಾಡಿದೆ. ಅವರ ಕುಟುಂಬ ವರ್ಗಕ್ಕೆ, ಅಭಿಮಾನಿಗಳಿಗೆ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದರು.

# ಭ್ರಷ್ಟಾಚಾರವೇ ಕಾಂಗ್ರೆಸ್‌ನ ಏಕೈಕ ಸಾಧನೆ ಯಾವ ಪುರುಷಾರ್ಥಕ್ಕೆ ಸಮಾವೇಶ ಡಾ. ಅಶ್ವತ್ಥ್ ನಾರಾಯಣ್

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ: ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ಪೂರೈಸಿದ್ದರೂ, ಆಡಳಿತ ಸಂಪೂರ್ಣ ಕುಸಿದಿದೆ. ವೋಟ್ ಬ್ಯಾಂಕ್ ರಾಜಕಾರಣ, ಭ್ರಷ್ಟಾಚಾರವೇ ಈ ಸರ್ಕಾರದ ಮೂರು ವರ್ಷದ ಸಾಧನೆಯಾಗಿದ್ದು, ರಾಜ್ಯದಲ್ಲಿ ಅಭಿವೃದ್ದಿ ಪತನವಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್.ಅಶ್ವತ್ಥ್ ನಾರಾಯಣ್ ತೀವ್ರ ವಾಗ್ದಾಳಿ ನಡೆಸಿದರು.

ನಗರದ ರಾಯರದೊಡ್ಡಿ ಸರ್ಕಲ್ ಬಳಿಯ ಖಾಸಗಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಜಿಲ್ಲಾ ಬಿಜೆಪಿ ಮುಖಂಡರ ಜೊತೆ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು. ಈ ವೇಳೆ ರಾಜ್ಯ ಸರ್ಕಾರದ ವೈಫಲ್ಯಗಳನ್ನು ಒಂದೊಂದಾಗಿ ತೆರೆದಿಟ್ಟರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ರಾಜ್ಯದಲ್ಲಿ 2,800 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೃತ ರೈತರ ಬಗ್ಗೆ ಸರ್ಕಾರಕ್ಕೆ ಕಿಂಚಿತ್ತೂ ಅನುಕಂಪವಿಲ್ಲ. ಗುತ್ತಿಗೆದಾರರಿಗೆ ಸರ್ಕಾರ 37 ಸಾವಿರ ಕೋಟಿ ರೂ. ಬಾಕಿ ಉಳಿಸಿಕೊಂಡಿದ್ದು, ಶೇ.60ರಷ್ಟು ನೇರ ಕಮಿಷನ್ ಪಡೆಯುವುದೇ ಸರ್ಕಾರದ ಮೂಲ ಉದ್ದೇಶವಾಗಿದೆ. ಇವರ ಸಾಧನೆ ಅಂದರೆ ಅದು 'ಭ್ರಷ್ಟಾಚಾರದ ಸಮರ್ಪಣೆ' ಎಂದು ಲೇವಡಿ ಮಾಡಿದರು.

ಭ್ರಷ್ಟಾಚಾರದಲ್ಲಿ ಮುಳುಗಿದ ಗೃಹ ಇಲಾಖೆ: ಆಡಳಿತ ಅವಧಿಯಲ್ಲಿ ಈಗಾಗಲೇ 90 ಮಂದಿ ಪೊಲೀಸರು ಅಮಾನತ್ತಾಗಿದ್ದಾರೆ. ಸಿಕ್ಕಿಬಿದ್ದವರೇ ಇಷ್ಟು ಮಂದಿ ಎಂದರೆ, ಬೆಳಕಿಗೆ ಬಾರದವರು ಇನ್ನೆಷ್ಟೋ ಇದ್ದಾರೆ. ಗೃಹ ಇಲಾಖೆ ಸಂಪೂರ್ಣ ಭ್ರಷ್ಟಾಚಾರದಲ್ಲಿ ಮುಳುಗಿದೆ. ಲಂಚದ ಹಣ ನೀಡಲಾಗದೆ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ರಾಜ್ಯ ಸರ್ಕಾರ ಜನರಿಗೆ 'ಆತ್ಮಹತ್ಯೆಯ ಗ್ಯಾರಂಟಿ' ನೀಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕುರ್ಚಿಗಾಗಿ ಕಿತ್ತಾಟ: ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಎಲ್ಲೆಡೆ ಭ್ರಷ್ಟಾಚಾರ ನಡೆಯುತ್ತಿದೆ. ಈ ಸರ್ಕಾರದಲ್ಲಿರುವವರಿಗೆ ಆತ್ಮಸಾಕ್ಷಿ ಇಲ್ಲ, ಕೊಲೆಗಡುಕರ ಸರ್ಕಾರ ಇದ್ದರೆ ಅದು ಕಾಂಗ್ರೆಸ್ ಸರ್ಕಾರ. ಕಾಂಗ್ರೆಸ್‌ನಲ್ಲಿ ಅಧಿಕಾರಕ್ಕಾಗಿ ಕಿತ್ತಾಟ ನಡೆಯುತ್ತಿದೆ. ಒಬ್ಬರು ಕುರ್ಚಿ ಉಳಿಸಿಕೊಳ್ಳಲು ಹೋರಾಡುತ್ತಿದ್ದರೇ ಮತ್ತೊಬ್ಬರು ಕುರ್ಚಿ ಎಳೆಯುವವರಾಗಿದ್ದಾರೆ ಎಂದು ವ್ಯಂಗ್ಯವಾಡಿದರು.

ರಾಜ್ಯದ ತಲಾವಾರು ಸಾಲ 1.20 ಲಕ್ಷ ರೂ.ಗೆ ಏರಿದ್ದು, ವರ್ಷಕ್ಕೆ 53 ಕೋಟಿ ರೂ. ಬಡ್ಡಿ ಪಾವತಿಸಲಾಗುತ್ತಿದೆ. ಕೈಗಾರಿಕಾ ಬೆಳವಣಿಗೆಯ ದರ ಶೇ.15ರಿಂದ ಶೇ.5ಕ್ಕೆ ಕುಸಿದಿದೆ. ಮೀಸಲಾತಿಯನ್ನು ಶೇ.7ರಿಂದ ಶೇ.3ಕ್ಕೆ ಇಳಿಸಲಾಗಿದೆ. ಎಸ್‌ಟಿಪಿ ನಿಧಿ ಹಾಗೂ ಗ್ಯಾರಂಟಿ ಹಣವನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಬೆಂಗಳೂರು ಸುತ್ತಮುತ್ತ 35 ಸಾವಿರ ಎಕರೆ ನೀರಾವರಿ ಭೂಮಿಯನ್ನು ರೈತರಿಂದ ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ. ವಿದ್ಯುತ್ ಅಭಾವ, ಬೆಲೆ ಏರಿಕೆ ಹಾಗೂ ಹಾಲು ದರ ಹೆಚ್ಚಳದ ಲಾಭ ರೈತರಿಗೆ ತಲುಪುತ್ತಿಲ್ಲ ಎಂದು ಆರೋಪಿಸಿದರು.

ಭ್ರಷ್ಟಾಚಾರದ ಸಮಾವೇಶ: ಕೇಂದ್ರ ಸರ್ಕಾರ ಕಳುಹಿಸಿದ ಯೂರಿಯಾವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಲಾಗಿದೆ. ಇವರ ಆಡಳಿತವನ್ನು ದಿವಾಳಿತನ ಮತ್ತು ಭ್ರಷ್ಟಾಚಾರದ ಸಮಾವೇಶ ಎಂದು ಕರೆಯುವುದೇ ಸೂಕ್ತ. ರಾಜ್ಯದಲ್ಲಿ ಶಾಂತಿ–ನೆಮ್ಮದಿ ಇಲ್ಲದಂತಾಗಿದೆ, ಮಕ್ಕಳು ಆತಂಕದಲ್ಲಿದ್ದಾರೆ. ಕೌಶಲ್ಯ, ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಸಾಕಷ್ಟು ಅನುಭವಿಗಳು ಸರ್ಕಾರದಲ್ಲಿದ್ದರೂ ಉತ್ತಮ ಆಡಳಿತ ನೀಡಲು ಸಾಧ್ಯವಾಗಿಲ್ಲ ಎಂದು ಅಶ್ವತ್ಥ್ ನಾರಾಯಣ್ ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ, ಮಾಜಿ ಅಧ್ಯಕ್ಷ ಹುಲವಾಡಿ ದೇವರಾಜು, ಮುಖಂಡರಾದ ಗೌತಮ್‌ಗೌಡ, ಪ್ರಸಾದ್‌ಗೌಡ, ಆರ್.ವಿ.ಸುರೇಶ್, ಪ್ರಸಾದ್, ಎಸ್.ಆರ್.ನಾಗರಾಜು, ಬಸವನಪುರ ಪ್ರಕಾಶ್, ಚೇತನ್ ಶಿವಲಿಂಗಯ್ಯ, ಚಂದನ್ ಮೋರೆ, ವೇದ ವೆಂಕಟೇಶ್, ನಾಗೇಶ್, ಪದ್ಮನಾಭ, ರುದ್ರದೇವರು, ಶಿವಾನಂದ, ಕಾಳಯ್ಯ, ಚನ್ನಪ್ಪ, ಪ್ರವೀಣ್‌ಗೌಡ, ಸಂತೋಷ್, ರಾಜು, ರಂಜನ್, ಸಿದ್ದರಾಜು ಮತ್ತಿತರರು ಇದ್ದರು.

# ಮಳೆಗಾಳಿ ಆರ್ಭಟಕ್ಕೆ ಧರೆಗುರುಳಿದ 40 ಕ್ಕೂ ಹೆಚ್ಚು ವಿದ್ಯುತ್ ಕಂಬಗಳು

# ಯಳನಾಡು ಗ್ರಾಪಂ ವ್ಯಾಪ್ತಿಯಲ್ಲಿ ಕತ್ತಲ ಲೋಕ!

ಸೂರ್ಯಪ್ರಗತಿನ್ಯೂಸ್.ಕಾಂ





ಹುಳಿಯಾರು :ರಾತ್ರಿ ಸತತವಾಗಿ ಬೀಸುತ್ತಿರುವ ಭಾರಿ ಬಿರುಗಾಳಿ ಹಾಗೂ ಸಿಡಿಲು ಸಹಿತ ಮಳೆಗೆ ಹುಳಿಯಾರು ಹೋಬಳಿಯ ಯಳನಾಡು ಗ್ರಾಪಂ ವ್ಯಾಪ್ತಿಯಲ್ಲಿ 40 ಕ್ಕೂ ಹೆಚ್ಚು ವಿದ್ಯುತ್ ಕಂಬಗಳು ಧರೆಗುರುಳಿವೆ.. ಹಲವು ಕಡೆ ಟ್ರಾನ್ಸ್‌ಫಾರ್ಮರ್‌ಗಳು ಮುರಿದು ಬಿದ್ದಿದ್ದು, ವಿದ್ಯುತ್ ವ್ಯವಸ್ಥೆ ಸಂಪೂರ್ಣ ಅಸ್ತವ್ಯಸ್ತಗೊಂಡಿದ್ದು ಹತ್ತಾರು ಹಳ್ಳಿಗಳು ಕತ್ತಲೆಯಲ್ಲಿ ಮುಳುಗುವಂತಾಗಿದೆ.

ಅಪ್ಪಳಿಸಿದ ಬಿರುಗಾಳಿಗೆ ಯಳನಡು, ಸಿಂಗಾಪುರ, ಮೋಟಿಹಳ್ಳಿ, ಕೆರೆಸೂರುಗೊಂಡನಹಳ್ಳಿ ಹಾಗೂ ಹುಳಿಯಾರು ಸಮೀಪದ ಕೆಂಕೆರೆ ವ್ಯಾಪ್ತಿಯಲ್ಲಿ ಅಕ್ಷರಶಃ ಪ್ರಳಯ ಸೃಷ್ಟಿಯಾಗಿದೆ. ಇಲ್ಲಿ ಸುಮಾರು 40 ಕ್ಕೂ ಹೆಚ್ಚು ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ಮೂರು ಪ್ರಮುಖ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಕೇಂದ್ರಗಳು ನೆಲಕ್ಕುರುಳಿವೆ. ಅಲ್ಲದೆ, ಹುಳಿಯಾರು ಶಾಖೆ–2 ರ ಪಂಡರಗುತ್ತಿ ಬಳಿ ಪ್ರೈಮರಿ ಮತ್ತು ಸೆಕೆಂಡರಿ ಮಾರ್ಗದ ಮೇಲೆ ಬೃಹತ್ ಮರಗಳು ಬಿದ್ದಿದ್ದರಿಂದ ಸಾಲು ಸಾಲು ಕಂಬಗಳು ಮುರಿದುಹೋಗಿವೆ.

ಅವಘಡದ ತೀವ್ರತೆ ಅರಿತ ಬೆಸ್ಕಾಂ ಅಧಿಕಾರಿಗಳು ಮತ್ತು ಲೈನ್‌ಮನ್ ಸಿಬ್ಬಂದಿ ಯುದ್ಧೋಪಾದಿಯಲ್ಲಿ ಕಾರ್ಯಪ್ರವೃತ್ತರಾಗಿದ್ದಾರೆ. ಸೋಮವಾರ ರಾತ್ರಿಯಿಂದಲೇ ದುರಸ್ತಿ ಕಾರ್ಯ ನಡೆಸಲಾಗಿದ್ದು, ಮಧ್ಯರಾತ್ರಿಯಲ್ಲೇ ಹಲವು ಕಡೆ ವಿದ್ಯುತ್ ಸರಬರಾಜನ್ನು ಯಶಸ್ವಿಯಾಗಿ ಮರುಸ್ಥಾಪಿಸಲಾಗಿದೆ. ಮಳೆಯಿಂದಾಗಿ ತೋಟ ಹಾಗೂ ಜಮೀನುಗಳಲ್ಲಿ ನೀರು ನಿಂತು ಕೆಸರಾಗಿದ್ದು, ಕಂಬಗಳನ್ನು ಸಾಗಿಸಲು ಟ್ರ್ಯಾಕ್ಟರ್‌ಗಳು ಚಲಿಸಲಾಗುತ್ತಿಲ್ಲ. ಇಂತಹ ದುರ್ಗಮ ಜಾಗಗಳಲ್ಲಿ ಕಂಬಗಳನ್ನು ಬದಲಾಯಿಸಲು ಸಿಬ್ಬಂದಿ ಹರಸಾಹಸ ಪಡುತ್ತಿದ್ದು, ಸಂಪೂರ್ಣ ವಿದ್ಯುತ್ ಸಂಪರ್ಕ ಕಲ್ಪಿಸಲು ಸ್ವಲ್ಪ ಸಮಯಾವಕಾಶ ಬೇಕಾಗಬಹುದು

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

# ರಾಜ್ಯ ಮಟ್ಟದ ಪಾದರಕ್ಷಾ ತಯಾರಿಕಾ ಸ್ಪರ್ಧೆಗೆ ಅರ್ಜಿ ಆಹ್ವಾನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಡಾ: ಬಾಬು ಜನಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ರಾಜ್ಯ ಮಟ್ಟದ ಪಾದರಕ್ಷಾ ತಯಾರಿಕಾ ಸ್ಪರ್ಧೆಗಾಗಿ ಪರಿಶಿಷ್ಟ ಜಾತಿಯ ಚರ್ಮ ಕುಶಲಕರ್ಮಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ನೈಜ ಚರ್ಮ ಕುಶಲಕರ್ಮಿಗಳಿಗೆ ಕರಕುಶಲತೆಯ ಕೌಶಲ್ಯ ಹಾಗೂ ಪಾದರಕ್ಷೆಗಳ ತಯಾರಿಕೆಯ ನೈಪುಣ್ಯ ಸೃಜನಶೀಲತೆ, ತಾಂತ್ರಿಕ ಕೌಶಲ್ಯವನ್ನು ಗುರುತಿಸಿ ಉತ್ತೇಜಿಸುವ ಉದ್ದೇಶದಿಂದ ಚರ್ಮ ಕುಶಲಕರ್ಮಿಗಳಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಸುವರ್ಣ ಅವಕಾಶ ಕಲ್ಪಿಸಿ, ಸ್ಥಳದಲ್ಲೇ ಪಾದರಕ್ಷಾ ತಯಾರಿಕೆ ಸ್ಪರ್ಧೆಯನ್ನು ಆಯೋಜಿಸಲು ಉದ್ದೇಶಿಸಲಾಗಿದೆ.

ಆಸಕ್ತರು ಮೇ 30ರೊಳಗಾಗಿ ಭರ್ತಿ ಮಾಡಿದ ಅರ್ಜಿಯನ್ನು ಡಾ: ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ, ಕೇಂದ್ರ ಕಚೇರಿ, ಬೆಂಗಳೂರು ಇವರಿಗೆ ಅಂಚೆ ಮೂಲಕ ಸಲ್ಲಿಸಬಹುದು.

ಸ್ಪರ್ಧೆಯಲ್ಲಿ ಭಾಗವಹಿಸುವವರು ಪರಿಶಿಷ್ಟ ಜಾತಿಗೆ ಸೇರಿದ ಚರ್ಮ ಕುಶಲಕರ್ಮಿಗಳಾಗಿರಬೇಕು. 18 ರಿಂದ 55 ವರ್ಷದೊಳಗಿನವರಾಗಿರಬೇಕು. ಪಾದರಕ್ಷೆಯನ್ನು ತಯಾರಿಸಲು ಅವಶ್ಯವಿರುವ ಕಚ್ಚಾವಸ್ತು ಹಾಗೂ ಅಗತ್ಯ ಟೂಲ್ಸ್‌ಗಳನ್ನು ಸ್ವತಃ ತಾವೇ ತರಬೇಕು. ಸ್ಪರ್ಧೆಯಲ್ಲಿ ಭಾಗವಹಿಸುವ ಕುಶಲಕರ್ಮಿಗಳು ತಮ್ಮದೇ ಸ್ವಂತ ಖರ್ಚಿನಲ್ಲಿ ಬರಬೇಕು. ಸೂಕ್ತ ದಾಖಲೆಗಳನ್ನು ನೀಡಿದ್ದಲ್ಲಿ ಸ್ಪರ್ಧಾರ್ಥಿಗಳಿಗೆ ಮಾತ್ರ ಟಿ.ಎ. ಮತ್ತು ಡಿ.ಎ. ಒದಗಿಸಲಾಗುವುದು. ಪುರುಷ/ಮಹಿಳೆಯರ ಒಂದು ಜೊತೆ ಪಾದರಕ್ಷೆಗಳನ್ನು ಮಾತ್ರ ತಯಾರಿಸಬೇಕು. ಕೊಲ್ಹಾಪುರಿ ಮಾದರಿಯ ಪಾದರಕ್ಷೆಗಳನ್ನು ಸ್ಪರ್ಧೆಯಲ್ಲಿ ಪರಿಗಣಿಸಲಾಗುವುದಿಲ್ಲ.

ಸ್ಪರ್ಧೆಯು ಜೂನ್ 6ರಂದು ಬೆಳಿಗ್ಗೆ 11 ರಿಂದ ಸಂಜೆ 5ಗಂಟೆಯವರೆಗೆ ಕರ್ನಾಟಕ ಇನ್ಸ್ಟಿಟ್ಯೂಟ್ ಆಫ್ ಲೆದರ್ & ಫ್ಯಾಷನ್ ಟೆಕ್ನಾಲಜಿ, ಉಲ್ಲಾಳ ಉಪನಗರ, ಕೆಂಗೇರಿ, ಬೆಂಗಳೂರು–560110 ಇಲ್ಲಿ ನಡೆಯಲಿದೆ. ಅರ್ಜಿ ನಮೂನೆಯನ್ನು https://lidkar.com ನಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ/ಜಿಲ್ಲಾ ಸಂಯೋಜಕರುಗಳನ್ನು ಅಥವಾ ಸಹಾಯವಾಣಿ 9482300400ಯನ್ನು ಸಂಪರ್ಕಿಸಬೇಕೆಂದು ಪ್ರಕಟಣೆ ತಿಳಿಸಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಗ್ಯಾರಂಟಿಗಳು ಇಡೀ ದೇಶಕ್ಕೆ ಮಾದರಿಯಾಗಿವೆ; ನಮ್ಮ ಗ್ಯಾರಂಟಿ ಯೋಜನೆಗಳನ್ನು ಬಿಜೆಪಿಯವರು ನಕಲು ಮಾಡುತ್ತಿದ್ದಾರೆ";ಡಿಕೆಶಿ

ಒಂದನೇ ಪುಟದಿಂದ



ಎಲ್ಲಾ ರಾಜ್ಯಗಳು ಗ್ಯಾರಂಟಿ ಮಾದರಿ ಅನುಸರಿಸುತ್ತಿವೆ

"ನಮ್ಮ ಬಿಜೆಪಿ ಸ್ನೇಹಿತರುಗಳು, ಪ್ರಧಾನಮಂತ್ರಿಗಳು ನಮ್ಮ ಗ್ಯಾರಂಟಿ ಯೋಜನೆಗಳ ಬಗ್ಗೆ ಟೀಕೆಗಳ ಸುರಿಮಳೆಯನ್ನೇ ಮಾಡಿದರು. ಇವತ್ತು ಪ್ರತಿಯೊಂದು ರಾಜ್ಯದಲ್ಲೂ ಅವರೇ ಗ್ಯಾರಂಟಿ ಯೋಜನೆ ಪ್ರಕಟಿಸುತ್ತಿದ್ದಾರೆ. ಯಾವುದೇ ಪಕ್ಷವೂ ಇದಕ್ಕೆ ಹೊರತಾಗಿಲ್ಲ. ಗ್ಯಾರಂಟಿಗಳು ಇಡೀ ದೇಶಕ್ಕೆ ಮಾದರಿಯಾಗಿವೆ. ನಮ್ಮ ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡುತ್ತಿದ್ದಾರೆ" ಎಂದರು.

"ನಾವು ಅಂದು ಜನಸಾಮಾನ್ಯರ ಜೀವನ ಉಳಿಯಬೇಕು ಎಂದು ಬದ್ಧತೆಯಿಂದ ಕೆಲಸ ಮಾಡಿದೆವು. ಈಗ ಎಲ್ಲ ಅಗತ್ಯ ವಸ್ತುಗಳ ಬೆಲೆ ಗಗನಕ್ಕೆ ಹೋಗುತ್ತಿದೆ. ಆದಾಯ ಪಾತಳಕ್ಕೆ ಇಳಿದಿದೆ. ಇಂತಹದಕ್ಕೆ ಸಹಾಯ ಮಾಡಬೇಕು ಅಂತಲೇ ನಾವು ಗ್ಯಾರಂಟಿ ಯೋಜನೆಗಳನ್ನು ಪ್ರಾರಂಭ ಮಾಡಿದೆವು. ಈಗ ವಿರೋಧ ಪಕ್ಷಗಳು ಸಹ ನಮ್ಮ ಜನಪರ ಗ್ಯಾರಂಟಿ ಮಾದರಿಯನ್ನೇ ಅನುಸರಿಸುತ್ತಿವೆ" ಎಂದರು.

### ಎಲ್ಲರ ಗೆಲುವಿಗೆ ಗ್ಯಾರಂಟಿಗಳು ಸ್ಫೂರ್ತಿ

"ಕೇರಳ, ತಮಿಳುನಾಡು, ಆಂಧ್ರ, ತೆಲಂಗಾಣ, ಮಹಾರಾಷ್ಟ್ರ ಜೊತೆಗೆ ಬಿಜೆಪಿ ಸರ್ಕಾರ ಇರೋ ರಾಜ್ಯಗಳು, ಎಲ್ಲಾ ಸರ್ಕಾರಗಳು ಕೂಡ ನಮ್ಮ ಗ್ಯಾರಂಟಿಗಳನ್ನೇ ಅನುಸರಿಸುತ್ತಿವೆ. ಅವರ ಚುನಾವಣೆ ಜಯಕ್ಕೆ ನಮ್ಮ ಗ್ಯಾರಂಟಿಗಳೇ ಸ್ಫೂರ್ತಿಯಾಗಿವೆ. ವಿರೋಧ ಪಕ್ಷದವರು ಟೀಕೆ ಮಾಡ್ತಾರೆ. ಆ ಟೀಕೆ ನಾವು ಯಾವತ್ತೂ ತಲೆ ಕೆಡಿಸಿಕೊಳ್ಳಲ್ಲ. ಏಕೆಂದರೆ ಟೀಕೆಗಳು ಸಾಯುತ್ತವೆ, ನಮ್ಮ ಕೆಲಸಗಳು ಮಾತ್ರ ಉಳಿಯುತ್ತವೆ. ನಮ್ಮನ್ನ ಟೀಕೆ ಮಾಡುವ ವಿರೋಧ ಪಕ್ಷದವರಿಗೆ ನಮ್ಮ ಕಾರ್ಯಕ್ರಮಗಳೇ ಉತ್ತರ" ಎಂದರು.

"ಆರನೇ ಗ್ಯಾರಂಟಿಯಾಗಿ ಕೃಷ್ಣ ಬೈರೇಗೌಡರ ನೇತೃತ್ವದಲ್ಲಿ 1,11,11,111 ಜನರಿಗೆ ಭೂಮಿ ಗ್ಯಾರಂಟಿಯನ್ನ ಕೊಟ್ಟಿದ್ದೇವೆ. ಬೆಂಗಳೂರು ನಗರದಲ್ಲಿ 27 ಲಕ್ಷದ ಜನರಿಗೆ ಭೂಮಿ ಗ್ಯಾರಂಟಿಯನ್ನು ನಾವು ಕೊಟ್ಟಿದ್ದೇವೆ. ಬಿಜೆಪಿ, ಜನತಾದಳದ ಸ್ನೇಹಿತರಲ್ಲಿ ಕೆಲವರು ಇದನ್ನು ಟೀಕೆ ಮಾಡ್ತಾ ಇದ್ದಾರೆ. ಭಗವಂತ ನಿಮಗೆ ಅವಕಾಶ ಕೊಟ್ಟಿದ್ದಾಗ. ಡಬಲ್ ಎಂಜಿನ್ ಸರ್ಕಾರ ಇದ್ದಾಗ ಇಂತಹ ಜನಪರ ಕೆಲಸವನ್ನು ನೀವು ಏಕೆ ಮಾಡಲು ಆಗಲಿಲ್ಲ. ಕೋವಿಡ್ ವೇಳೆ ಮರಣ ಹೊಂದಿದ, ನರಳಿದ ಜನರಿಗೆ ನಿಮ್ಮ ಕೈಯಲ್ಲಿ ಸರಿಯಾಗಿ ನ್ಯಾಯ ಒದಗಿಸಿಕೊಡಲು ಆಗಲಿಲ್ಲ. ಇತ್ತೀಚೆಗೆ ನಾನು, ಸಿದ್ದರಾಮಯ್ಯನವರು ಚಾಮರಾಜನಗರ ಜಿಲ್ಲೆಯ ಆಕ್ಸಿಜನ್ ದುರಂತದಲ್ಲಿ ಸತ್ತಂತ ಜನರ ಕುಟುಂಬ ಸದಸ್ಯರಿಗೆ ಸರ್ಕಾರಿ ಕೆಲಸ ನೀಡಿದ್ದೇವೆ. ಶರಣಪ್ರಕಾಶ್ ಪಾಟೀಲರು, ಜಿಲ್ಲಾ ಮಂತ್ರಿಗಳಾದ ವೆಂಕಟೇಶ್ ರವರ ಸಹಕಾರದಿಂದ ಇಡೀ ರಾಜ್ಯದಲ್ಲಿ ಒಂದು ಇತಿಹಾಸವನ್ನು ಸೃಷ್ಟಿ ಮಾಡಿದ್ದೇವೆ" ಎಂದರು.

"ಕಾಂಗ್ರೆಸ್ ಸರ್ಕಾರ ಜನರ ಬದುಕಿನಲ್ಲಿ ಬದಲಾವಣೆಯನ್ನು ತಂದೇ ತರುತ್ತದೆ ಎನ್ನುವ ನಂಬಿಕೆಯಿಂದ 136 ಜನ ಶಾಸಕರನ್ನು ಆಯ್ಕೆ ಮಾಡಿದ್ದೀರಿ. ತುಮಕೂರು ಜಿಲ್ಲೆಯಲ್ಲಿ ಏಳು ಜನ ಶಾಸಕರನ್ನ ಕೊಟ್ಟ ನಿಮ್ಮ ಋಣವನ್ನು ತೀರಿಸಲಿಕ್ಕೆ ಒಂದು ದೊಡ್ಡ ಅವಕಾಶವನ್ನು ನೀಡಿದ್ದೀರಿ" ಎಂದರು.

> **ಎರಡನೇ ಬೆಂಗಳೂರಾಗಿ ತುಮಕೂರು ಅಭಿವೃದ್ಧಿ**
>
> "ಬೆಂಗಳೂರು ಬಿಟ್ಟರೆ ತುಮಕೂರಿಗೆ ಒಂದು ದೊಡ್ಡ ಇತಿಹಾಸ. ಶಿಕ್ಷಣ ಕಾಶಿ, ಕಲ್ಪತರು ನಾಡು, ಧಾರ್ಮಿಕ, ಐತಿಹಾಸಿಕ, ದಕ್ಷಿಣದ ಕಾಶಿಯಂತೆ ಕಂಗೊಳಿಸುತ್ತಿದೆ. ಅನ್ನ, ಅಕ್ಷರ, ಆಶ್ರಯ ನೀಡಿದಂತಹ ಒಂದು ಪವಿತ್ರವಾದಂತಹ ಭೂಮಿ. ಸಹೋದ್ಯೋಗಿ ಪರಮೇಶ್ವರ್ ಅವರು, ಬೆಂಗಳೂರಿನ ಜನಸಂಖ್ಯೆ ನಿಯಂತ್ರಣ ಮಾಡಬೇಕಾದರೆ ಇರುವುದು ಒಂದೇ ಉಪಾಯ ಉತ್ತರ ಭಾಗದಲ್ಲಿ ಇರುವ ತುಮಕೂರನ್ನು ಎರಡನೇ ಬೆಂಗಳೂರಾಗಿ ಪರಿವರ್ತನೆ ಮಾಡಬೇಕು ಎಂದಿದ್ದಾರೆ" ಎಂದರು.

### ಕೊಟ್ಟ ಕುದುರೆ ಏರಲು ಆಗದ ಕುಮಾರಸ್ವಾಮಿ

"ಮೊನ್ನೆ ತಾನೆ ಕುಮಾರಸ್ವಾಮಿಯವರು ಬೆಂಗಳೂರು ನಗರದಲ್ಲಿ ಬಿ ಖಾತೆಯಿಂದ ಎ ಖಾತೆ ಮಾಡಿಸಬೇಡಿ, ನಮ್ಮ ಸರ್ಕಾರ ಬಂದು ಬಿಡುತ್ತದೆ. ನೀವು ಯಾರೂ ದುಡ್ಡು ಕೊಡಲು ಹೋಗಬೇಡಿ. ನಾವು ಮಾಡುತ್ತೇವೆ ಎಂದು ಮಾತಾಡಿದ್ದಾರೆ. ಅದಕ್ಕೆ ಹಿಂದೆಯೇ ನಾನು ಉತ್ತರ ನೀಡಿದ್ದೇ. ಕೊಟ್ಟ ಕುದುರೆಯನ್ನು ಏರಲು ಆಗದವನು ವೀರನೂ ಅಲ್ಲ ಶೂರನೂ ಅಲ್ಲ. ಅಧಿಕಾರ ಕೊಟ್ಟಾಗ ನಿಮಗೇನೂ ಮಾಡುವುದಕ್ಕೆ ಆಗಲಿಲ್ಲ. ಅಧಿಕಾರ ಇಲ್ಲದೆ ಹೋದಾಗ ಬರೀ ಹದಿನೇಳು ಜನರನ್ನು ಇಟ್ಟುಕೊಂಡು ಹರಿತೀನಿ, ಹರಿತೀನಿ, ಹರಿತೀನಿ ಅಂದ್ರೆ, ನಿಮ್ಮ ಕೈಯಲ್ಲಿ ಏನೂ ಮಾಡಲಿಕ್ಕೆ ಸಾಧ್ಯ ಇಲ್ಲ. ನಿಮ್ಮ ಶಾಸಕರು ವಿಧಾನಸಭೆಯಲ್ಲಿ ಬಡವರ ಬಗ್ಗೆ ಒಂದಿನವೂ ಮಾತಾಡಿಲ್ಲ. ನಿಮ್ಮಲ್ಲಿರುವಂತಹ ಸಮಸ್ಯೆ ಬಗೆಹರಿಸಿಕೊಳ್ಳುವುದಕ್ಕೆ ನಿಮ್ಮ ಹತ್ತಿರ ಸಮಯ ಇಲ್ಲ. ಇನ್ನು ನಿಮ್ಮ ಸರ್ಕಾರ ಅಧಿಕಾರಕ್ಕೆ ಬರುತ್ತದೆ ಎಂದು ಮಾತಾಡುವುದು ಬೇಡ" ಎಂದು ವಾಗ್ದಾಳಿ ನಡೆಸಿದರು.

"ಬಿಜೆಪಿಯವರು ಸಿಕ್ಕ ಅವಕಾಶದಲ್ಲಿ ಏನು ಬದಲಾವಣೆ ತಂದಿದ್ದಾರೆ. ನಾನು ಬಿಜೆಪಿ ಸ್ನೇಹಿತರಿಗೆ ಕೇಳುತ್ತೇನೆ. ನಿಮ್ಮ ಪ್ರಧಾನ ಮಂತ್ರಿಗಳು ಯಾಕೆ ಪೆಟ್ರೋಲ್ ಕಡಿಮೆ ಉಪಯೋಗಿಸಿ, ಅಡುಗೆ ಎಣ್ಣೆ ಕಡಿಮೆ ಉಪಯೋಗಿಸಿ, ಮೆಟ್ರೋ ಬಳಸಿ, ಬಸ್ ಅಲ್ಲಿ ಓಡಾಡಿ, ಕಾರನ್ನು ಬಳಸಬೇಡಿ, ಚಿನ್ನ ತಗೋಬೇಡಿ, ಇರುವ ಮಾಂಗಲ್ಯ ತೆಗೆದು ಹಾಕಿ, ಅರಶಿನ ಕೊಂಬು ಕಟ್ಟಿಕೊಳ್ಳಿ ಅಂತ ಹೇಳ್ತಾ ಇದ್ದಾರೆ. ನಿಮ್ಮ ಶ್ರಮ, ನಿಮ್ಮ ಬದುಕು, ನಿಮ್ಮ ಕಷ್ಟ, ನಿಮ್ಮ ಜೀವನ, ಇರೋದೊಂದು ಜೀವನ. ಆ ಜೀವನದಲ್ಲಿ ಸಂತೋಷವಾಗಿರುವುದು ಬೇಡವೇ? ಪ್ರಧಾನ ಮಂತ್ರಿಗಳು ಈ ಪರಿಸ್ಥಿತಿಗೆ ಉತ್ತರ ನೀಡಬೇಕು" ಎಂದು ಆಗ್ರಹಿಸಿದರು.

"ಡಾಲರ್ ಬೆಲೆ ತೊಂಬತ್ತಾರು ರೂಪಾಯಿ ಆಗೋಗಿದೆ. ಪೆಟ್ರೋಲ್ ಬೆಲೆಯನ್ನು ಮಂಗಳವಾರವೂ ಒಂದು ರೂಪಾಯಿ ಜಾಸ್ತಿ ಮಾಡಿದ್ದಾರೆ. ಇದರ ಬಗ್ಗೆ ಬಿಜೆಪಿ ನಾಯಕರುಗಳು ಯಾಕೆ ಮಾತಾಡ್ತಾ ಇಲ್ಲ? ಸಂಸತ್ ಸದಸ್ಯರು ಯಾಕೆ ದನಿ ಎತ್ತುತ್ತಿಲ್ಲ? ಅಶೋಕ್ ಅವರು, ವಿಜಯೇಂದ್ರ ಅವರು ಯಾಕೆ ಇದರ ಬಗ್ಗೆ ಚರ್ಚೆ ಮಾಡ್ತಾ ಇಲ್ಲ? ಜನರ ಹೊಟ್ಟೆ ಪಾಡಿಗೆ ನಿಮ್ಮ ಉತ್ತರವೇನು" ಎಂದು ವ್ಯಂಗ್ಯವಾಡಿದರು.

"ಅಂಬೇಡ್ಕರ್ ಅವರು ಹೇಳ್ತಾರೆ 'ಇತಿಹಾಸ ಮರೆತವನು ಇತಿಹಾಸವನ್ನು ಸೃಷ್ಟಿ ಮಾಡಲಿಕ್ಕೆ ಸಾಧ್ಯ ಇಲ್ಲ' ಎಂದು. ಅದೇ ರೀತಿ ಮರಕ್ಕೆ ಬೇರು ಎಷ್ಟು ಮುಖ್ಯನೋ ಮನುಷ್ಯನಿಗೆ ನಂಬಿಕೆ ಕೂಡ ಅಷ್ಟೇ ಮುಖ್ಯ. ನಿಮಗೆಲ್ಲ ಈ ಕಾಂಗ್ರೆಸ್ ಸರ್ಕಾರದ ಮೇಲೆ ನಂಬಿಕೆ ಇದೆ. ನಮ್ಮದು ಇತಿಹಾಸವಿರುವ ಪಕ್ಷ, ಬಡವರ ಬದುಕಿನಲ್ಲಿ ಬದಲಾವಣೆ ಮಾಡಿದ ಪಕ್ಷ. ಅದೇ ರೀತಿ ಈ ಜನರ ಬೇರಿಗೆ ನಿಮ್ಮ ಬದುಕಿಗೆ ಕಾಂಗ್ರೆಸ್ ಸರ್ಕಾರವೇ ಆಧಾರ.

"ಶಕ್ತಿ ಯೋಜನೆ ದಾಖಲೆ ಸೃಷ್ಟಿಸಿದೆ. ರಾಮಲಿಂಗಾರೆಡ್ಡಿ ಅವರ ನೇತೃತ್ವದಲ್ಲಿ ಇತಿಹಾಸ ನಿರ್ಮಾಣ ಆಗಿದೆ. ಐದು ಸಾವಿರ ಹೊಸ ಬಸ್ಸನ್ನ ಖರೀದಿ ಮಾಡಿದ್ದಾರೆ. ನನ್ನ ತಾಯಂದಿರು ಆತ್ಮವಿಶ್ವಾಸದಿಂದ ಓಡಾಡುತ್ತಿದ್ದಾರೆ. ದೇವರು ಕೊಟ್ಟಿರೋದು ಎರಡು ಆಯ್ಕೆ, ಒಂದು ಕೊಟ್ಟು ಹೋಗಬೇಕು, ಇಲ್ಲ ಬಿಟ್ಟು ಹೋಗಬೇಕು. ಅದೇರೀತಿ ಅಧಿಕಾರ ಸಿಕ್ಕಿರುವಾಗ ಎಲ್ಲ ಮಂತ್ರಿಗಳು ತಮ್ಮ ಇಲಾಖೆಯಲ್ಲಿ ಒಂದು ದೊಡ್ಡ ಸಾಧನೆಗಳನ್ನು ಮಾಡಿ ಜನರಿಗೆ ಶಕ್ತಿ ತುಂಬಿದ್ದಾರೆ" ಎಂದರು.

"ಈ ದೇಶಕ್ಕೆ ರಾಷ್ಟ್ರಧ್ವಜ, ರಾಷ್ಟ್ರಗೀತೆ, ಸಂವಿಧಾನ ಕೊಟ್ಟ ಪಕ್ಷ ನಮ್ಮದು. ಇಂತಹ ಒಂದು ಐತಿಹಾಸಿಕವಾದ ಪುಟಕ್ಕೆ ಬಿಜೆಪಿ ಸೇರಲು ಆಗಿಲ್ಲ. ಇದಕ್ಕೆ ನಿಮ್ಮ ಆಶೀರ್ವಾದ ಯಾವಾಗಲೂ ಇರಲಿ ಅಂತ ಹೇಳಿ ಪ್ರಾರ್ಥಿಸುತ್ತೇನೆ. ಈ ಕಾರ್ಯಕ್ರಮ ಆಯೋಜಿಸಿದ ಪರಮೇಶ್ವರ್ ಮತ್ತು ಈ ಜಿಲ್ಲೆಯ ಎಲ್ಲಾ ಶಾಸಕರಿಗೆ, ಮುಖಂಡರುಗಳಿಗೆ ಕೃತಜ್ಞತೆ ಸಲ್ಲಿಸುತ್ತೇನೆ" ಎಂದು ಹೇಳಿದರು.

### ಮಾತು ಕೊಡುವುದು ಮುಖ್ಯವಲ್ಲ. ಕೊಟ್ಟ ಮಾತು ಉಳಿಸಿಕೊಳ್ಳುವುದು ಮುಖ್ಯ

"ನಾನು, ಸಿದ್ದರಾಮಯ್ಯನವರು, ನಮ್ಮ ಪಕ್ಷದ ವರಿಷ್ಠರು ಚರ್ಚೆ ಮಾಡಿ ಪ್ರಣಾಳಿಕೆ ಸಮಿತಿಯ ಅಧ್ಯಕ್ಷರನ್ನಾಗಿ ಪರಮೇಶ್ವರ್ ಅವರನ್ನ ನೇಮಕ ಮಾಡಲಾಯಿತು. ಮೂರು ವರ್ಷಗಳಲ್ಲಿ ನಾವು ಅನೇಕ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದೇವೆ. ತಮಗೆಲ್ಲ ಕೊಟ್ಟಂತಹ ಆಶ್ವಾಸನೆಗಳನ್ನು ಈಡೇರಿಸಿದ್ದೇವೆ. ಮಾತು ಕೊಡುವುದು ಮುಖ್ಯ ಅಲ್ಲ. ಆ ಮಾತನ್ನು ಉಳಿಸಿಕೊಳ್ಳುವುದು ಅಷ್ಟೇ ಮುಖ್ಯ ಎಂಬುದನ್ನು ನಾವು ತೋರಿಸಿದ್ದೇವೆ. ದೇವರು ವರ, ಶಾಪ ಏನೂ ಕೊಡುವುದಿಲ್ಲ. ಅವಕಾಶ ಮಾತ್ರ ಕೊಡುತ್ತಾನೆ. ಕೊಟ್ಟಂತ ಅವಕಾಶದಲ್ಲಿ ನೀವು ಸರಿಯಾದ ರೀತಿ ಉಪಯೋಗಿಸಿಕೊಳ್ಳಬೇಕು ಅಂತ ಹೇಳಿ. ಇವತ್ತು ಈ ಕೃಷ್ಣ ಬೈರೇಗೌಡರ ನೇತೃತ್ವದಲ್ಲಿ ನಿಮಗೆ ಹಕ್ಕು ಪತ್ರಗಳನ್ನು ನೀಡುತ್ತಿದ್ದೇವೆ" ಎಂದರು.

"ಅಧಿಕಾರಿಗಳು ತಮ್ಮ ಅವಧಿಯಲ್ಲಿ ಜನರ ಋಣವನ್ನು ಯಾವ ರೀತಿ ತೀರಿಸಿದ್ದೀರಿ ಅದು ಮುಖ್ಯ. ನೀವು ಯಾರನ್ನೂ ಕೂಡ ಮೆಚ್ಚಿಸುವ ಅವಶ್ಯಕತೆ ಇಲ್ಲ. ನಿಮ್ಮ ಆತ್ಮಸಾಕ್ಷಿಗೆ ತಕ್ಕಂತೆ ದುಡಿದಿದ್ದೀರಿ. ಹೀಗಾಗಿ ಕೃಷ್ಣ ಬೈರೇಗೌಡರ ಮುಖಂಡತ್ವದಲ್ಲಿ ಕಂದಾಯ ಇಲಾಖೆಯ ಎಲ್ಲ ಅಧಿಕಾರಿಗಳಿಗೆ ಕಾಂಗ್ರೆಸ್ ಸರ್ಕಾರ ಹಾಗೂ ನಾಡಿನ ಜನತೆ ಪರವಾಗಿ ಅವರಿಗೆ ಒಂದು ಕೋಟಿ ನಮಸ್ಕಾರಗಳನ್ನು ಅರ್ಪಿಸಲಿದ್ದೇನೆ" ಎಂದರು.

SP NEWS ಸಣ್ ಸುದ್ದಿ

## ಜಿಲ್ಲಾ ಮಟ್ಟದ ಪಿಂಚಣಿ ಅದಾಲತ್

ದಿನಾಂಕ 21.5.2026 ರಂದು ಜಿಲ್ಲಾ ಖಜಾನೆ ವತಿಯಿಂದ ಡಯಟ್ ಸಭಾಂಗಣದಲ್ಲಿ ಬೆಳಗ್ಗೆ 11 ಗಂಟೆಗೆ ತುಮಕೂರು ಜಿಲ್ಲಾ ಮಟ್ಟದ. ಪಿಂಚಣಿ ಮತ್ತು ಜಿ ಪಿ ಎಫ್ ಗೆ ಸಂಬಂಧಿಸಿದಂತೆ ಅದಾಲತ್ ನ್ನು ಏರ್ಪಡಿಸಿರುತ್ತಾರೆ. ಯಾರಿಗಾದರೂ ಪಿಂಚಣಿ ಬಗ್ಗೆ ಸಮಸ್ಯೆಗಳು ಇದ್ದರೆ ನಮ್ಮ ಸಂಘದ ಕಚೇರಿಗೆ ಲಿಖಿತ ವಾಗಿ ತಲುಪಿಸಲು ಕೋರಿದೆ. ಅಥವಾ ತಾವು ಅದಾಲತ್ ನಡೆಯುವ ಸ್ಥಳ ಕ್ಕೆ ಅಂದು ಖುದ್ದಾಗಿ ಆಗಮಿಸಿ ಸಮಸ್ಯೆ ಯ ಅಹವಾಲು ಸಲ್ಲಿಸ ಬಹುದು. ಹೆಚ್ಚಿನ ಸಂಖ್ಯೆಯಲ್ಲಿ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ ಜಿಲ್ಲಾ ಶಾಖೆಯ ಅಧ್ಯಕ್ಷರು ಬಾ. ಹ.ರಮಾ ಕುಮಾರಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಧನಾ ಸಮಾವೇಶದಲ್ಲಿ ಚಿಕ್ಕನಾಯಕನಹಳ್ಳಿ ತಹಸೀಲ್ದಾರ್‌ಗೆ ರಾಜ್ಯ ಮಟ್ಟದ ಪ್ರಶಸ್ತಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರಿನಲ್ಲಿ ಮಂಗಳವಾರ ನಡೆದ ರಾಜ್ಯ ಸರ್ಕಾರದ ಸಾಧನಾ ಸಮಾವೇಶದಲ್ಲಿ ಚಿಕ್ಕನಾಯಕನಹಳ್ಳಿ ತಹಸೀಲ್ದಾರ್ ಮಮತ ಅವರಿಗೆ ರಾಜ್ಯ ಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಯಿತು.ಕಂದಾಯ



ಇಲಾಖೆ ಜಾರಿಗೊಳಿಸಿರುವ ಮಹತ್ವಾಕಾಂಕ್ಷಿ ಇ–ಪೌತಿ ಯೋಜನೆ ಹಾಗೂ ಕಂದಾಯ ಗ್ರಾಮ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದ ಹಿನ್ನೆಲೆ, ಅವರ ವಿಶಿಷ್ಟ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಾರ್ವಜನಿಕರಿಗೆ ಕಂದಾಯ ಸೇವೆಗಳನ್ನು ತ್ವರಿತ ಹಾಗೂ ಪರಿಣಾಮಕಾರಿಯಾಗಿ ಒದಗಿಸುವಲ್ಲಿ ತೋರಿದ ಶ್ರೇಷ್ಠ ಕಾರ್ಯನಿರ್ವಹಣೆ, ಆಡಳಿತಾತ್ಮಕ ನಿಷ್ಠೆ ಹಾಗೂ ಜನಸ್ನೇಹಿ ಸೇವೆಯನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು.

ಸಾಧನಾ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ತಹಸೀಲ್ದಾರ್ ಮಮತ ಅವರು ಪ್ರಶಸ್ತಿಯನ್ನು ಸ್ವೀಕರಿಸಿದರು.

## ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಜಿಕೆವಿಕೆಯ ಆಡಳಿತ ಮಂಡಳಿಯ ಸದಸ್ಯರಾಗಿ ಡಾ.ಕೆ.ಎಸ್. ರಾಜಶೇಖರಪ್ಪ ನೇಮಕ



ಶಿರಾ:ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದಲ್ಲಿ ಕೃಷಿ ಇಂಜಿನಿಯರಿಂಗ್ ಮಹಾವಿ ದ್ಯಾಲಯದ ವಿಶೇಷಾಧಿಕಾರಿಗಳಾದ ಡಾ|| ಕೆ. ಎಸ್. ರಾಜಶೇಖರಪ್ಪ ರವರನ್ನು ಆಡಳಿತ ಮಂಡಳಿಯ ಸದಸ್ಯರಾಗಿ ಗೌರವಾನ್ವಿತ ರಾಜ್ಯಪಾಲರು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಈ ನೇಮಕಾತಿ ಅವಧಿಯು ಜುಲೈ–1, 2026ರಿಂದ ಮೂರು ವರ್ಷಗಳದ್ದಾಗಿರುತ್ತದೆ. ಡಾ. ಕೆ.ಎಸ್. ರಾಜಶೇಖರಪ್ಪ ಅವರು ಮಣ್ಣು ಮತ್ತು ನೀರು ಸಂರಕ್ಷಣಾ ನಿರ್ವಹಣೆಯಲ್ಲಿ 32 ವರ್ಷಗಳ ಕಾಲ ಕಾರ್ಯನಿರ್ವಹಿಸಿದ್ದಾರೆ.

## ಅನಾಮಧೇಯ ಶವ ಪತ್ತೆ

ಪಾವಗಡ: ಪಟ್ಟಣದ ಮಾರುತಿ ವೈನ್ ಸೆಂಟರ್ ಸಮೀಪದ ರಸ್ತೆ ಬದಿಯ ಪುಟ್ ಪಾತ್ ನಲ್ಲಿ ಸುಮಾರು 40ರಿಂದ45 ವರ್ಷದ ಅನಾಮಧೇಯ ಶವ ಪತ್ತೆಯಾಗಿರುವ ಕುರಿತು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನಾಮಧೇಯ ವ್ಯಕ್ತಿಯ ಚಹರೆ ಗುರುತು : 5.4 ಅಡಿ ಎತ್ತರ, ಕೋಲಿಮುಖ, ಎಣ್ಣೆಗೆಂಪು ಮೈಬಣ್ಣ, ಮಾಸಲು ಬಿಳಿ ಷರ್ಟು, ನೀಲಿ ಪ್ಯಾಂಟು ಧರಿಸಿರುತ್ತಾರೆ. ವ್ಯಕ್ತಿಯ ಸಂಬಂಧಿಕರ ಬಗ್ಗೆ ಮಾಹಿತಿ ಅಥವಾ ಸುಳಿವು ಸಿಕ್ಕಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಅಥವಾ ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 100ಕ್ಕೆ ಅಥವಾ ಪಾವಗಡ ಪಟ್ಟಣ ಪೊಲೀಸ್ ಠಾಣೆಯ ದೂ.ಸಂ:08136245666/ 9480802941, ಮಧುಗಿರಿ ಡಿ.ಎಸ್.ಪಿ. ದೂ.ಸಂ 9480802924, ತುಮಕೂರು ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ. :9480802900, ಪಾವಗಡ ಗುಪ್ತಮಾಹಿತಿ ಸಿಬ್ಬಂದಿ ದೂ.ಸಂ:– 6363726683, 9845208042 ಗೆ ಸಂಪರ್ಕಿಸುವಂತೆ ಅವರು ತಿಳಿಸಿದ್ದಾರೆ.



ಸಾಧನಾ ಸಮಾವೇಶದಲ್ಲಿ ಕೊರಟಗೆರೆ ತಹಸೀಲ್ದಾರ್‌ಗೆ ರಾಜ್ಯ ಮಟ್ಟದ ಪ್ರಶಸ್ತಿ

ತುಮಕೂರಿನಲ್ಲಿ ಮಂಗಳವಾರ ನಡೆದ ರಾಜ್ಯ ಸರ್ಕಾರದ ಸಾಧನಾ ಸಮಾವೇಶದಲ್ಲಿ ಕೊರಟಗೆರೆ ತಹಸೀಲ್ದಾರ್ ಮಮತ ಅವರಿಗೆ ರಾಜ್ಯ ಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಂದಾಯ ಇಲಾಖೆ ಜಾರಿಗೊಳಿಸಿರುವ ಮಹತ್ವಾಕಾಂಕ್ಷಿ ಇ–ಪೌತಿ ಯೋಜನೆ ಹಾಗೂ ಕಂದಾಯ ಗ್ರಾಮ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದ ಹಿನ್ನೆಲೆ, ಅವರ ವಿಶಿಷ್ಟ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಾರ್ವಜನಿಕರಿಗೆ ಕಂದಾಯ ಸೇವೆಗಳನ್ನು ತ್ವರಿತ ಹಾಗೂ ಪರಿಣಾಮಕಾರಿಯಾಗಿ ಒದಗಿಸುವಲ್ಲಿ ತೋರಿದ ಶ್ರೇಷ್ಠ ಕಾರ್ಯನಿರ್ವಹಣೆ, ಆಡಳಿತಾತ್ಮಕ ನಿಷ್ಠೆ ಹಾಗೂ ಜನಸ್ನೇಹಿ ಸೇವೆಯನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು.

ಸಾಧನಾ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ತಹಸೀಲ್ದಾರ್ ಮಂಜುನಾಥ್ ಅವರು ಪ್ರಶಸ್ತಿಯನ್ನು ಸ್ವೀಕರಿಸಿದರು.

## ತುಮಕೂರು ಜಿಲ್ಲೆಯಲ್ಲೇ ಮಾದರಿ ಶಾಲೆಯಾದ ಶಿರಾ ಸರ್ಕಾರಿ ಪ್ರೌಢಶಾಲೆಗೆ ವಿದ್ಯಾರ್ಥಿಗಳನ್ನು ದಾಖಲು ಮಾಡಿ: ಚಿದಾನಂದ್ ಎಂ.ಗೌಡ



ಶಿರಾ:ನಗರದ ಕೇಂದ್ರ ಭಾಗದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಶಾಲೆಯನ್ನು ಸರ್ಕಾರದ ಅನುದಾನ ಸುಮಾರು 3.50 ಕೋಟಿ ರೂ. ಹಾಗೂ ನನ್ನ ವೈಯಕ್ತಿಕ ಅನುದಾನ 1.50 ಕೋಟಿ ರೂ. ಸೇರಿ 5 ಕೋಟಿ ರೂ ವೆಚ್ಚದಲ್ಲಿ ತುಮಕೂರು ಜಿಲ್ಲೆಯಲ್ಲೇ ಮಾದರಿ ಶಾಲೆಯಾಗಿ ನಿರ್ಮಿಸಿದ್ದು, ಈ ಶಾಲೆಗೆ ಪೋಷಕರು ತಮ್ಮ ಮಕ್ಕಳನ್ನು 8ನೇ ತರಗತಿಯಿಂದ ವಿದ್ಯಾಭ್ಯಾಸಕ್ಕೆ ದಾಖಲಾತಿ ಮಾಡಿಸಿ ಎಂದು ವಿಧಾನಪರಿಷತ್ ಸದಸ್ಯ ಚಿದಾನಂದ್ ಎಂ.ಗೌಡ ಮನವಿ ಮಾಡಿದರು.

ಅವರು ಸೋಮವಾರ ಈ ಬಗ್ಗೆ ಶಾಲೆಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು. 1947ರಲ್ಲಿ ಉದ್ಘಾಟನೆಯಾಗಿದ್ದ ಈ ಶಾಲೆ ಶಿಥಿಲಾವಸ್ಥೆಯಲ್ಲಿತ್ತು. ಅದನ್ನು ನಾವು ಸುಸಜ್ಜಿತವಾಗಿ ಹೈಟೆಕ್ ಮಾದರಿಯಲ್ಲಿ ನಿರ್ಮಿಸಿದ್ದೇವೆ. ಇಲ್ಲಿ 8ನೇ ತರಗತಿಯಿಂದ 10ನೇ ತರಗತಿವರೆಗೆ ಕನ್ನಡ ಮತ್ತು ಇಂಗ್ಲೀಷ್ ಮಾಧ್ಯದಲ್ಲಿ ಸುಮಾರು 2000 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡಲು ಅವಕಾಶ ಇದೆ. 10ನೇ ತರಗತಿ ನಂತರ ಇಲ್ಲಿಯೇ ಪಿಯುಸಿವರೆಗೂ ವಿದ್ಯಾಭ್ಯಾಸ ಮಾಡಬಹುದು. ಈ ಅವಕಾಶವನ್ನು ವಿದ್ಯಾರ್ಥಿಗಳು ಸದ್ಬಳಕೆ ಮಾಡಿಕೊಳ್ಳಬೇಕು. ಪೋಷಕರೂ ಸಹ ತಮ್ಮ ಮಕ್ಕಳನ್ನು ದಾಖಲು ಮಾಡುವ ಮೂಲಕ ಸದುಪಯೋಗಪಡಿಸಿಕೊಳ್ಳಬೇಕು. ಹಣದ ಕೊರತೆ ಇರುವವರು ಸಾಲ ಮಾಡಿ ಖಾಸಗಿ ಶಾಲೆಗೆ ದಾಖಲು ಮಾಡುವ ಬದಲು ಸರ್ಕಾರಿ ಶಾಲೆಗೆ ದಾಖಲಾತಿ ಮಾಡಿಸಿ ಎಂದರು.

ಸರ್ಕಾರಿ ಶಾಲೆಗಳ ದಾಖಲಾತಿಗೆ ಪ್ರಚಾರದ ಕೊರತೆ ಇದೆ.

ಸುಸಜ್ಜಿತ ಕಟ್ಟಡ ನಿರ್ಮಿಸಿದರೂ ಸಹ ವಿದ್ಯಾರ್ಥಿಗಳು ದಾಖಲು ಆಗದಿದ್ದರೆ ಪ್ರಯೋಜನವಿಲ್ಲ. ಸರ್ಕಾರ ಜೂನ್ 1 ರಂದು ಶಾಲೆ ಪ್ರಾರಂಭೋತ್ಸವ ಮಾಡುತ್ತದೆ. ನನ್ನ ಪ್ರಕಾರ ಸರ್ಕಾರಿ ಶಾಲೆಯವರು 15 ದಿನಗಳಿಗೆ ಮುಂಚಿತವಾಗಿಯೇ ದಾಖಲಾತಿ ಆಂದೋಲನ ಮಾಡಬೇಕು. ಮನೆ ಮನೆಗೆ ಹೋಗಿ ಪ್ರಚಾರ ಮಾಡಬೇಕು. ಪ್ರಚಾರಕ್ಕೆ ನಾನೂ ಸಹ ಬರುತ್ತೇನೆ ಅದಕ್ಕಾಗಿ ಕರಪತ್ರವನ್ನೂ ಮುದ್ರಣ ಮಾಡಿಸಿದ್ದೇನೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮುಖ್ಯ ಶಿಕ್ಷಕ ಇಸ್ಮಾಯಿಲ್, ಮಧುಗಿರಿ ವಿಭಾಗದ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಹೊನ್ನಗೊಂಡನಹಳ್ಳಿ ಚಿಕ್ಕಣ್ಣ, ಕಾರ್ಯದರ್ಶಿ ಕುಮಾರ್ ಮಾಸ್ಟರ್, ರೈತಮೋರ್ಚಾ ಅಧ್ಯಕ್ಷ ಮದ್ದೆವಳ್ಳಿ ರಾಮಕೃಷ್ಣ, ಎಸ್‌ಟಿ ಮೋರ್ಚಾ ಅಧ್ಯಕ್ಷ ತೇಜೇಶ್ವರ್, ಪುರುಷೋತ್ತಮ್, ಬೊಪ್ಪರಾಯಪ್ಪ, ಡಿ.ಎಚ್.ಗೌಡ, ಶಿಕ್ಷಕರಾದ ಚಂದ್ರಶೇಖರ್ ಸೇರಿದಂತೆ ಹಲವರು ಹಾಜರಿದ್ದರು.

## ಮಾದಿಗ ಮಹಾಸಭಾ ಸಂಘಟಿತಗೊಳಿಸಲು ಕರೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು; ರಾಜ್ಯದಲ್ಲಿ ಬಹುಸಂಖ್ಯಾತರಾಗಿರುವ ಮಾದಿಗ ಸಮುದಾಯ ಅತಿಹೆಚ್ಚು ಜನಸಂಖ್ಯೆಯನ್ನು ಹೊಂದಿದೆ ಶಿಕ್ಷಣ, ರಾಜಕೀಯ ಸಾಮಾಜಿಕ ಆರ್ಥಿಕ ಹಾಗೂ ಇತರೆ ನಿಟ್ಟಿನಲ್ಲಿ ಹಿಂದೆ ಉಳಿದಿದ್ದು ಬದಲಾದ ಕಾಲಘಟ್ಟದಲ್ಲಿ ಸಮುದಾಯ ಒಂದಾಗುವ ಸಮಯ ಬಂದಿದೆ ಹಾಗಾಗಿ ಶೈಕ್ಷಣಿಕವಾಗಿ ಮುಂದೆ ಬರಲು ಮಾದಿಗ ಮಹಾಸಭಾವನ್ನು ಸಂಘಟಿಸಬೇಕೆಂದು ಮಾದಿಗ ಮಹಾಸಭಾದ ಸಂಸ್ಥಾಪಕ ಅಧ್ಯಕ್ಷರಾದ ಸಚಿವ ಮುನಿಯಪ್ಪ ಅವರು ಕರೆ ನೀಡಿದ್ದಾರೆ. ನಗರದಲ್ಲಿ ಮಂಗಳವಾರ ನೀರಿಕ್ಷಣಾ ಮಂದಿರದಲ್ಲಿ ಸಮುದಾಯದ ಮುಖಂಡರೊಟ್ಟಿಗೆ ಸಭೆ ನಡೆಸಿ ಸಮುದಾಯ ಒಗ್ಗಟಾಗಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಮಾದಿಗ ಸಭಾದ ಜಿಲ್ಲಾಧ್ಯಕ್ಷ ವೈ.ಹೆಚ್.ಹುಚ್ಚಯ್ಯ, ಮಾಜಿ ಶಾಸಕ ಗಂಗಹನುಮಯ್ಯ, ಕೆಂಚಮಾರಯ್ಯ, ಕೊಟ್ಟಶಂಕರ್, ಡಾ.ಎಲ್.ಮುಂಕುಂದರಾಜ್, ಕೊಡಿಯಾಲ ಮಹಾದೇವ್ ವಕೀಲ ಜೆ.ಸಿ.ರಂಗಧಾಮಯ್ಯ, ಹನುಮಂತರಾಯಪ್ಪ, ಸೇರಿದಂತೆ ಸಮುದಾಯ ವಿವಿಧ ಮುಖಂಡರು ಭಾಗವಹಿಸಿದ್ದರು.

## ಪತ್ರಿಕೆಗಳಲ್ಲಿ ನಿಷ್ಠೆ ಮತ್ತು ಕ್ರಿಯಾಶೀಲತೆ ಮುಖ್ಯ; ಕೇವಲ ಹೊಟ್ಟೆಪಾಡಿಗಾಗಿ ಪತ್ರಿಕೋದ್ಯಮವನ್ನು ಮಾಡಬೇಡಿ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು:ತುಮಕೂರು ವಿಶ್ವವಿ ದ್ಯಾನಿಲಯದ ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಹಾಗೂ ವಿಶ್ವವಿದ್ಯಾನಿಲಯ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಜಂಟಿ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಎರಡು ದಿನಗಳ ರಾಜ್ಯಮಟ್ಟದ ಮಾಧ್ಯಮ ಹಬ್ಬ ಇಂಪ್ರೆಶನ್ 2026 ಅತ್ಯಂತ ಯಶಸ್ವಿಯಾಗಿ ಸಂಪನ್ನಗೊಂಡಿತು. ಈ ಪ್ರತಿಷ್ಠಿತ ಮಾಧ್ಯಮ ಹಬ್ಬದ ಸಮಗ್ರ ಚಾಂಪಿಯನ್ ಶಿಪ್ ಅನ್ನು ಮೈಸೂರು ವಿಶ್ವವಿದ್ಯಾನಿಲಯ ಹಾಗೂ ಕರ್ನಾಟಕ ವಿಶ್ವವಿದ್ಯಾನಿಲಯ ಧಾರವಾಡ ಜಂಟಿಯಾಗಿ ತಮ್ಮ ಮುಡಿಗೇರಿಸಿಕೊಂಡಿವೆ. ರನ್ನರ್ ಆಗಿ ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ವಿಶ್ವವಿದ್ಯಾನಿಲಯ ಹೊರಹೊಮ್ಮಿದೆ.

ವಿಜೇತ ತಂಡಗಳಿಗೆ ಚಾಂಪಿಯನ್ ಟ್ರೋಫಿ ವಿತರಿಸಿ ಮಾತನಾಡಿದ ಬೆಂಗಳೂರಿನ ಇನ್ಫೋಸಿಸ್ ಲಿಮಿಟೆಡ್‌ನ ಇನ್ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಇಂಡಿಯಾ & ಸರ್ಕಾರಿ ಪಾಲುದಾರಿಕೆಗಳ ಸಹ ಉಪಾಧ್ಯಕ್ಷರು ಹಾಗೂ ಮುಖ್ಯಸ್ಥರಾದ ಸಂತೋಷ್ ಅನಂತಪುರ ಅವರು ನಾವು ನಮ್ಮನ್ನು ಈ ಜಗತ್ತಿಗೆ ಎಷ್ಟರ ಮಟ್ಟಿಗೆ ತೊಡಗಿಸಿಕೊಂಡಿದ್ದೇವೆ ಎಂಬುದು ಅತ್ಯಂತ ಪ್ರಮುಖವಾದದ್ದು ಎಂದು ನುಡಿದ ಅವರು, ಮಾಧ್ಯಮ ಕ್ಷೇತ್ರಕ್ಕೆ ಸಂವಹನವೇ ಜೀವಾಳ ಎಂದರು.

ಇಂದಿನ ಬದಲಾದ ಚಿಕ್ಕ ಜಗತ್ತಿನಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ವಿದ್ಯಾರ್ಥಿಗಳು ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು, ಕೇವಲ ಕೌಶಲ್ಯವಿದ್ದರೆ ಸಾಲದು, ಅದರ ಜೊತೆಗೆ ಹೆಚ್ಚು ಹೆಚ್ಚು ಭಾಷೆಗಳನ್ನು ಕಲಿಯಬೇಕು ಮತ್ತು ವ್ಯವಹಾರದ ದೃಷ್ಟಿಕೋನದತ್ತಲೂ ನಿಮ್ಮ ಚಿತ್ತವಿರಬೇಕು ಎಂದರು.

ತುಮಕೂರು ವಿವಿ ಕ್ಯಾಂಪಸ್ ಪತ್ರಿಕೆಯಾದ ಕಲ್ಪತರು ಟೈಮ್ಸ್ ಅನ್ನು ಬಿಡುಗಡೆಗೊಳಿಸಿ ಮಾತನಾಡಿದ ಹಿರಿಯ ಪತ್ರಕರ್ತರಾದ ಎಸ್. ನಾಗಣ್ಣ ಅವರು ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಚಲನ ಶಕ್ತಿ, ಕಲ್ಪನಾ ಶಕ್ತಿ ಹಾಗೂ ಅಂತಃಕರಣ ಅತ್ಯಂತ ಮುಖ್ಯವಾಗಿದ್ದು, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಯಾವುದೇ ಕಾರಣಕ್ಕೂ ಹಿಂಜರಿಕೆಯ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬಾರದು ಎಂದರು.

ಕೇವಲ ಹೊಟ್ಟೆಪಾಡಿಗಾಗಿ ಪತ್ರಿಕೋದ್ಯಮವನ್ನು ಮಾಡಬೇಡಿ, ಪತ್ರಿಕೆಗಳಲ್ಲಿ ನಿಷ್ಠೆ ಮತ್ತು ಕ್ರಿಯಾಶೀಲತೆ ತುಂಬಾ ಮುಖ್ಯವಾಗುತ್ತದೆ ಎಂದು ಅವರು ಪ್ರತಿಪಾದಿಸಿದರು. ಪ್ರಸ್ತುತ ಮಾಧ್ಯಮ ರಂಗದಲ್ಲಿ ಮೌಲ್ಯಗಳು ಕಳೆದುಹೋಗುತ್ತಿರುವುದರ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಮಾಧ್ಯಮವನ್ನು ಉಳಿಸಿ ಬೆಳೆಸುವ ತುರ್ತು ಅಗತ್ಯ ಇಂದು ನಮ್ಮ ಮುಂದಿದೆ ಎಂದರು.

ವಿದ್ಯಾರ್ಥಿಗಳು ಕೇವಲ ಭ್ರಮೆಯಿಂದ ಈ ಕ್ಷೇತ್ರಕ್ಕೆ ಬರದೆ, ನಿಜವಾದ ಆಸಕ್ತಿ ಇದ್ದರೆ ಮಾತ್ರ ಮಾಧ್ಯಮದತ್ತ ಹೆಜ್ಜೆ ಇಡಬೇಕು ಎಂದರು.

ಪರೀಕ್ಷಾ ಕುಲ ಸಚಿವರಾದ ಪ್ರೊ. ಹೆಚ್. ಎಸ್. ಮೋಹನ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.ಪ. ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರಾದ ಡಾ. ಸಿಬಂತಿ ಪದ್ಮನಾಭ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ವಿಷ್ಣುಧರನ್ ನಿರೂಪಿಸಿದರೆ, ಡಾ. ಪೃಥ್ವಿರಾಜ್ ಟಿ. ವಂದಿಸಿದರು. ಮೈಸೂರು, ಧಾರವಾಡ, ಹಾವೇರಿ, ರಾಯಚೂರು, ವಿಜಯಪುರ, ಬಳ್ಳಾರಿ, ಬಾಗಲಕೋಟೆ, ದಾವಣಗೆರೆ, ಬೆಂಗಳೂರು, ತುಮಕೂರು – ರಾಜ್ಯದ ವಿವಿಧ ಭಾಗಗಳ ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರು ಮಾಧ್ಯಮ ಹಬ್ಬದಲ್ಲಿ ಭಾಗವಹಿಸಿ ಅರ್ಥಪೂರ್ಣಗೊಳಿಸಿದರು.

## ಕಡಮಲಕುಂಟೆ ಗ್ರಾಮದಲ್ಲಿ ಬೆಂಕಿ ಅವಘಡ: 2 ಎಕರೆ ಅಡಿಕೆ ತೋಟ ಭಸ್ಮ, ರೈತನಿಗೆ ಲಕ್ಷಾಂತರ ರೂ ನಷ್ಟ

ಸೂರ್ಯಪ್ರಗತಿನ್ಯೂಸ್.ಕಾಂ



ಪಾವಗಡ: ಕಿಡಿಗೇಡಿಗಳು ಬೆಂಕಿ ಅಚ್ಚಿದ ಪರಿಣಾಮ ತಾಲ್ಲೂಕಿನ ಕಡಮಲಕುಂಟೆ ಗ್ರಾಮದ ರೈತರೊಬ್ಬರ 2 ಎಕರೆ ಅಡಿಕೆ ತೋಟ ಸುಟ್ಟಿದ್ದು, ಲಕ್ಷಾಂತರ ರೂಪಾಯಿ ನಷ್ಟವಾಗಿರುವ ಘಟನೆ ಸೋಮವಾರ ಮದ್ಯಾನ ನಡೆದಿದೆ.

ಮಾಜಿ ತಾಲ್ಲೂಕು ಪಂಚಾಯತ್ ಅಧ್ಯಕ್ಷೆ ವಿನೋದಮ್ಮ ಕೋಂ ರಾಮಾಂಜಿನಪ್ಪ ಕಡಮಲಕುಂಟೆ ಗ್ರಾಮದ ಸ ನಂ 26/4ರಲ್ಲಿ ಎರಡು ಎಕರೆ ಅಡಿಕೆ ತೋಟದಲ್ಲಿ ಬೆಂಕಿ ಅವಘಡ ನಡೆದಿದೆ. ತೋಟದಲ್ಲಿನ ಹನಿ ನೀರಾವರಿ ಪೈಪ್ ಸುಟ್ಟು ಕರಕಲಾಗಿವೆ. 800ಅಡಿಕೆ ಗಿಡ ಸುಟ್ಟಿದ್ದು ಪುನಃ ಚೇತರಿಸಿಕೊಳ್ಳಲಾಗದ ಸ್ಥಿತಿಯಲ್ಲಿವೆ.

ಮಾಜಿ ತಾಪಂ ಅಧ್ಯಕ್ಷೆ ವಿನೋದಮ್ಮ ಮತ್ತು ರಾಮಾಂಜಿನಪ್ಪ ದಂಪತಿಗಳು ತಮ್ಮ ಮನೆ ಇರುವ ಎರಡು ಎಕರೆ ಜಮೀನಿನಲ್ಲಿ ಹಗಲಿರುಳು ಶ್ರಮಿಸಿ, ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಅತ್ಯಂತ ಪ್ರೀತಿಯಿಂದ ಸಾಕಿ ಬೆಳೆಸಿದ್ದ 800 ಅಡಕೆ ಗಿಡಗಳು, ಮಿಶ್ರ ಬೆಳೆಯಾಗಿ ಫಸಲು ನೀಡುತ್ತಿದ್ದ ನುಗ್ಗೆ ಗಿಡಗಳು ಹಾಗೂ 10 ತೆಂಗಿನ ಮರಗಳು ಕಿಡಿಗೇಡಿಗಳು ಹಚ್ಚಿದ ಬೆಂಕಿಯ ಕೆನ್ನಾಲಿಗೆಗೆ ಸಿಲುಕಿ ಸಂಪೂರ್ಣವಾಗಿ ಸುಟ್ಟು ಕರಕಲಾಗಿವೆ. ಬೇಸಿಗೆಯ ತಾಪ ಹಾಗೂ ಗಾಳಿಯ ತೀವ್ರತೆಗೆ ತೋಟದ ಮಧ್ಯದಲ್ಲಿದ್ದ ಮನೆಗೂ ಬೆಂಕಿ ವ್ಯಾಪಿಸಿದ್ದು, ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಧಾವಿಸಿ, ಮನೆಗೆ ಹೆಚ್ಚಿನ ಹಾನಿಯಾಗದಂತೆ ತಡೆದು, ತೋಟದ ಬೆಂಕಿಯನ್ನು ಸಂಪೂರ್ಣವಾಗಿ ಹಸಿಗೊಳಿಸುವಲ್ಲಿ ಯಶಸ್ವಿಯಾಗಿದ್ದಾರೆ.

"ಮಕ್ಕಳಿಗಿಂತ ಹೆಚ್ಚಾಗಿ ಪ್ರೀತಿಯಿಂದ ಸಾಕಿ ಬೆಳೆಸಿದ್ದ ಅಡಕೆ, ನುಗ್ಗೆ ಹಾಗೂ ತೆಂಗಿನ ಗಿಡಗಳು ಕಣ್ಣಮುಂದೆಯೇ ಸುಟ್ಟು ಬೂದಿಯಾಗಿರುವುದನ್ನು ನೋಡಲು ಸಾಧ್ಯವಾಗುತ್ತಿಲ್ಲ. ಸಾಲ–ಸೋಲ ಮಾಡಿ ತೋಟ ಮಾಡಿದ್ದೆವು. ಕೈಗೆ ಬಂದ ಫಸಲು ಕದೀಮರ ಪಾಲಾಗಿದೆ. ನಮ್ಮ ತೋಟ ಮತ್ತು ಮನೆಗೆ ಬೇಕೆಂದೇ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದಾರೆ. ಪೊಲೀಸರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ತನಿಖೆ ನಡೆಸಿ ಕೃತ್ಯ ಎಸಗಿದ ದುಷ್ಕರ್ಮಿಗಳನ್ನು ಬಂಧಿಸಬೇಕು ಮತ್ತು ಸರ್ಕಾರ ನಮಗೆ ಆದ ನಷ್ಟಕ್ಕೆ ಸೂಕ್ತ ಪರಿಹಾರ ಒದಗಿಸಬೇಕು" ಎಂದು ತೋಟದ ಮಾಲೀಕ ರಾಮಾಂಜಿನಪ್ಪ ಅಳಲು ತೋಡಿಕೊಂಡಿದ್ದಾರೆ

ತೋಟದಲ್ಲಿನ ಕಸಕ್ಕೆ ಯಾರೋ ಬೆಂಕಿ ಹಚ್ಚಿರಬಹುದು. ಅದು ಇಡೀ ಜಮೀನು ಆವರಿಸಿಕೊಂಡಿದೆ ಎನ್ನಲಾಗಿದೆ. ಬೆಂಕಿಗೆ ಆಹುತಿಯಾದ ಅಡಿಕೆ 5 ವರ್ಷದ ಬೆಳೆಯಾಗಿದ್ದು ಲಕ್ಷಾಂತರ ರೂಪಾಯಿ ನಷ್ಟವಾಗಿದೆ.

## ಚಿರತೆ ದಾಳಿಯಿಂದ ಕುರಿಗಾಹಿ ಪಾರು; ಇನ್ನೊಂದೆಡೆ ರೈತನ ಮೇಲೆ ಅಟ್ಯಾಕ್ ಸೆರೆ ಹಿಡಿಯಲು ಬೋನ್ ಇಟ್ಟ ಅಧಿಕಾರಿಗಳು

ಸೂರ್ಯಪ್ರಗತಿನ್ಯೂಸ್.ಕಾಂ



ಮಧುಗಿರಿ :–ಹೊಲದಲ್ಲಿ ಕೆಲಸ ಮಾಡಲು ಬೆಳಗಿನ ಜಾವ ಹೋಗುತ್ತಿದ್ದ ವೇಳೆ ಚಿರತೆ ದಾಳಿ ನಡೆಸಿ ರೈತ ಗಾಯಗೊಂಡಿರುವ ಘಟನೆ ಮಂಗಳವಾರ ಬೆಳಗಿನ ಜಾವ ನಡೆದಿದೆ.

ತಾಲೂಕಿನ ದೊಡ್ಡೇರಿ ಹೋಬಳಿ ವಜ್ರದಹಳ್ಳಿ ಗ್ರಾಮದ ಗೊಲ್ಲರಹಟ್ಟಿಯ ಪುಟ್ಟ ಕರಿಯಪ್ಪನ ಪುತ್ರ ಶಾಂತರಾಜು ಜಮೀನಿಗೆ ಹೋಗುತ್ತಿದ್ದ ವೇಳೆ ಚಿರತೆ ದಾಳಿ ನಡೆಸಿದೆ .

ಗಾಯಾಳು ಮದುಗಿರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇತ್ತೀಚೆಗಷ್ಟೇ ಚಿರತೆ ದಾಳಿಯಿಂದ ತಪ್ಪಿಸಿಕೊಂಡಿದ್ದ ರೈತನ ಸುದ್ದಿ ಮಾಸುವ ಮೊದಲೇ ಮತ್ತೊಂದು ಘಟನೆ ಸಂಭವಿಸಿರುವುದು ರೈತಾಪಿ ವರ್ಗದಲ್ಲಿ ಆತಂಕ ಮೂಡಿಸಿದೆ.

### ಚಿರತೆ ದಾಳಿ, ಸಮಯ ಪ್ರಜ್ಞೆಯಿಂದ ಕುರಿಗಾಹಿ ಪಾರು



ಮಧುಗಿರಿ :– ಚಿರತೆಯೊಂದು ಕುರಿಗಾಹಿ ಮೇಲೆ ದಾಳಿ ನಡೆಸಿದ್ದು ಸಮಯಪ್ರಜ್ಞೆಯಿಂದ ಮೈ ಮೇಲಿದ್ದ ಟವಲ್ ನ್ನು ಚಿರತೆ ಮುಖಕ್ಕೆ ಎಸೆದು ಕುರಿಗಾಹಿ ಪ್ರಾಣಾಪಾಯದಿಂದ ಪಾರಾದ ಘಟನೆ ನಡೆದಿದೆ.

ತಾಲೂಕಿನ ದೊಡ್ಡೇರಿ ಗ್ರಾಮದ ಗೊಲ್ಲರ ಹಟ್ಟಿ ನಿವಾಸಿ ಕುರಿಗಾಹಿ ಕುಮಾರ್ ಡಿ.ಜಿ. ಯುವಕನು ಇದೇ ಗ್ರಾಮದ ಡಿ.ಎನ್. ನಾಗರಾಜು, ಮಹಾಲಿಂಗಯ್ಯ ರವರ ತೋಟದಲ್ಲಿ ಕುರಿಗಳನ್ನು ಮೇಯಿಸುತ್ತಿದ್ದಾಗ, ಆಹಾರಕ್ಕಾಗಿ ಹೊಂಚು ಹಾಕಿ ಕೂತಿದ್ದ ಚಿರತೆ ಏಕಾಏಕಿ ಕುರಿಗಳ ಮೇಲೆ ದಾಳಿ ಮಾಡಿದೆ ಎರಡು ಕುರಿಗಳ ಕುತ್ತಿಗೆ ಹಿಡಿದು ರಕ್ತ ಹೀರಿ, ಮತ್ತೊಂದು ಕುರಿಯನ್ನು ಅರ್ಧಂಬರ್ಧ ತಿಂದಿದೆ. ಇದನ್ನು ಕಂಡ ಕುಮಾರ್ ಕುರಿಗಳನ್ನು ಬಿಡಿಸಲು ಯತ್ನಿಸಿದಾಗ ಚಿರತೆ ಆತನ ಮೈ ಮೇಲೆಯೇ ಎರಗಲು ಮುಂದಾಗಿದೆ. ಸಮಯ ಪ್ರಜ್ಞೆಯಿಂದ ಮೈ ಮೇಲಿದ್ದ ಟವಲ್ ನ್ನು ಚಿರತೆ ಮೇಲೆ ಎಸೆದು ಕುರಿಗಾಹಿ ಕುಮಾರ್ ಪ್ರಾಣಾ ಪಾಯದಿಂದ ಪಾರಾಗಿದ್ದಾನೆ. ಚಿರತೆ ಮೂರನೇ ಕುರಿಯ ರಕ್ತ ಹೀರಿ ಪರಾರಿಯಾಗಿದೆ, ಘಟನೆ ನಂತರ ಅರಣ್ಯ ಇಲಾಖೆ ಎಚ್ಚೆತ್ತುಕೊಂಡು ಚಿರತೆಯನ್ನು ಸೆರೆ ಹಿಡಿಯಲು ಬೋನ್ ಇಟ್ಟಿದ್ದಾರೆ.

## ಬೀಮಸತಿ ಕ್ಷೇತ್ರವನ್ನು ರಾಜ್ಯಮಟ್ಟದ ಪ್ರೇಕ್ಷಣೀಯ ಸ್ಥಳವನ್ನಾಗಿಸುವ ಜವಾಬ್ದಾರಿ ನನ್ನದು – ಶಾಸಕ ಸಿ.ಬಿ.ಸುರಶ್‌ಬಾಬು

ಸೂರ್ಯಪ್ರಗತಿನ್ಯೂಸ್.ಕಾಂ



ಚಿಕ್ಕನಾಯಕನಹಳ್ಳಿ:–ರಾಷ್ಟ್ರದ ವಿವಿಧ ರಾಜ್ಯಗಳಿಂದ ಬೇಟಿ ನೀಡುವಂತಹ ಲಂಬಾಣಿ ಸಮುದಾಯದ ಒಂದು ಧಾರ್ಮಿಕ ಕ್ಷೇತ್ರವಾದ ಈ ದೊಡ್ಡೇಣ್ಣೆಗೆರೆ ಗ್ರಾಮದ ಈ ಬೀಮಾಸತಿ ದೇವಸ್ಥಾನದ ಕ್ಷೇತ್ರವನ್ನು ರಾಜ್ಯಮಟ್ಟದ ಪ್ರೇಕ್ಷಣೀಯ ಸ್ಥಳವನ್ನಾಗಿಸುವುದು ನಮ್ಮ ಜವಾಬ್ದಾರಿ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ತಾಲ್ಲೂಕಿನ ಹಂದನಕೆರೆ ಹೋಬಳಿಯ ದೊಡ್ಡೇಣ್ಣೆಗೆರೆ ಗ್ರಾಮದ ಬಳಿ ಇರುವ ಬೀಮಾಸತಿ ದೇವಾಲಯದ ಆವರಣದಲ್ಲಿ 50ಲಕ್ಷ ವೆಚ್ಚದ ಯಾತ್ರಿನಿವಾಸ ಕಟ್ಟಡಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು ನಮ್ಮ ಸಮಾಜದಲ್ಲಿರು ಎಲ್ಲಾ ಸಮುದಾಯಗಳು ಮುಖ್ಯವಾಹಿನಿಗೆ ಬರಬೇಕು ಎಲ್ಲರೂ ಸಾಮಾಜಿಕ, ಆರ್ಥಿಕ, ಶೈಕ್ಷಣಿಕವಾಗಿ ಅಭಿವೃದ್ಧಿಯಾಗಬೇಕು ಎಂಬುದು ನಮ್ಮ ಉದ್ದೇಶವಾಗಿದೆ ಈ ನಿಟ್ಟನಲ್ಲಿ ನಮ್ಮ 6ಕೋಟಿ ಅನುದಾನದಲ್ಲಿ ಹಿಂದುಳಿದಂತಹ ಲಂಬಾಣಿ, ಉಪ್ಪಾರ, ಯದವ, ಮಡಿವಾಳ, ಕುರುಬ ಸೇರಿದಂತೆ ಇತರೆ ಎಲ್ಲಾ ಸಮುದಾಯಗಳಿಗೆ ತಲಾ 50ಲಕ್ಷ ವೆಚ್ಚದ ಅನುದಾವನ್ನು ನೀಡಿದ್ದೇನೇ ಅದೇ ರೀತಿ ವೀರಶೈವ, ಹಾಗೂ ಒಕ್ಕಲಿಗ ಸಮುದಾಯಕ್ಕು ನಿಡಿದ್ದು ಅವರು ಜಾಗವನ್ನು ಗುರುತಿಸಿದರೆ ಕೂಡಲೆ ಅವರಿಗೂ 50ಲಕ್ಷ ನೀಡಲಾಗುವುದು ಎಂದ ಅವರು ಸಮಾಜದಲ್ಲಿ ಎಲ್ಲಾ ವರ್ಗದವರು ಮೇಲೆಬರಬೇಕಾಗಿದೆ ಎಲ್ಲರೂ ಒಂದೇ ಭಾವನೆ ನಮ್ಮಲ್ಲಿ ಮೂಡಬೆಕು ಎಂದ ಅವರು ಈ ಬೀಮಾಸತಿ ಕ್ಷೇತ್ರಕ್ಕೆ ಮಹಾರಾಷ್ಟ್ರ ಸೇರಿದಂತೆ ವಿವಿಧ ರಾಜ್ಯದ ಜನರು ಇಲ್ಲಿಗೆ ಬರುತ್ತಾರೆ ಅವರಿಗಾಗಿ ಭಕ್ತರಿಗಾಗಿ ಇಲ್ಲಿ ಒಂದು ಯಾತ್ರಿನಿವಾಸವನ್ನು ನಿರ್ಮಿಸಲಾಗುವುದು ಅದರಂತೆ ಇಲ್ಲಿ ಇನ್ನು ಯಾವ ಮೂಲಭೂ ಸೌಲಭ್ಯಗಳನ್ನು ನೀಡಬೇಕೊ ಅದನ್ನು ತಿಳಿಸಿದರೆ ಹಂತಹಂತವಾಗಿ ಅಭಿವೃದ್ಧಿ ಮಾಡಲಾಗುವುದು ಇದರೊಂದಿಗೆ ಕ್ಷೇತ್ರದಲ್ಲಿನ ಲಂಬಾಣಿ ತಾಂಡಗಳ ಅಭಿವೃದ್ಧಿಯನ್ನು ವಿಶೇಷ ಅನುದಾನ ತರುವ ಮೂಲಕ ಅಗತ್ಯವಾದ ಸೌಲಭ್ಯಗಳನ್ನು ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಜಿ.ಪಂ.ಮಾಜಿ ಅಧ್ಯಕ್ಷ ಹಾಗೂ ಲಂಬಾಣಿ ಸಮುದಾಯದ ಮುಖಂಡ ರಘುನಾಥ್ ಮಾತನಾಡಿ ನಮ್ಮ ಸಮುದಾಯದ ಅಭಿವೃದ್ದಿಗಾಗಿ ಎಲ್ಲರೂ ಶಿಕ್ಷಿತರಾಗಬೇಕು ಹಾಗೂ ಈ ಕ್ಷೇತ್ರದಲ್ಲಿನ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ರಸ್ತೆ ಸೇರಿದಂತೆ ಅಗತ್ಯವಾದ ಕೆಲಸಗಳನ್ನು ಮಾಡಬೇಕಿದ್ದು ಶಾಸಕರು ನಮ್ಮ ಮನವಿಗೆ ಸ್ಪಂದಿಸಿ ಈ ಯಾತ್ರಿ ನಿವಾಸವನ್ನು ನೀಡಿರುವುದು ಒಳ್ಳೆಯದಾಗಿದೆ ಎಂದರು.

ಮಾಜಿ ಜಿ.ಪಂ.ಸದಸ್ಯೆ ಲೋಹಿತಾಬಾಯಿ ಮಾತನಾಡಿ ನಮ್ಮ ಸಮುದಾಯಕ್ಕೆ ಸೇರಿದ ಶ್ಯಾವಿಗೆಹಳ್ಳಿಯ ಬಳಿ ಇರುವಂತಹ ಜಾಗವನ್ನು ಅಭಿವೃದ್ದಿಪಡಿಸುವ ಮೂಲಕ ನಮ್ಮ ಸಮಾಜಕ್ಕೆ ಅನುಕೂಲಮಾಡಿಕೊಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾಜಿ ತಾ.ಪಂ.ಅದ್ಯಕ್ಷೆ ಚೇತನಾಗಂಗಾಧರ್ ಸೇರಿದಂತೆ ಲಂಬಾಣಿ ಸಮುದಾಯದ ಮುಖಂಡರುಗಳಾದ ರಾಜನಾಯ್ಕ, ತಿಮ್ಮನಾಯ್ಕ, ಕರಿಯನಾಯ್ಕ ಸೇರಿದಂತೆ ಇತರರು ಇದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.